ಸಂಪುಟ : 10 ಸಂಚಿಕೆ: 209 ಪುಟ : 4+2 ಬೆಲೆ: 3.00 ಶನಿವಾರ ಸೆಪ್ಟೆಂಬರ್ 27 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 209 Pages : 4+2 Price : 3.00 Saturday September 27 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಚಿವ ಎಚ್ ಕೆ ಪಾಟೀಲ ಜಿಲ್ಲಾ ಪ್ರವಾಸ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು ಗದಗ ಜಿಲ್ಲೆಯಲ್ಲಿ ಸೆಪ್ಟೆಂಬರ್ 27 ಹಾಗೂ 28 ರಂದು ಪ್ರವಾಸ ಕೈಗೊಳ್ಳಲಿದ್ದು, ಪ್ರವಾಸ ವಿವರ ಇಂತಿದೆ.

ಸೆ. 27 ರಂದು ಬೆಳಿಗ್ಗೆ 11 ಗಂಟೆಗೆ ಗದಗನ ನಾಗಾವಿ ಗ್ರಾಮ ಗಂಗೋತ್ರಿ ಆವರಣ, ಮಹಾತ್ಮ ಗಾಂಧಿ ಆರ್‌ಡಿಪಿಆರ್‌ಯು ಕೌಶಲ್ಯ ವಿಕಾಸ ಭವನದಲ್ಲಿ ಜರುಗುವ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಉದ್ಘಾಟಿಸುವರು. ಮಧ್ಯಾಹ್ನ 12 ಗಂಟೆಗೆ ಜಿಮ್ಸ್ ಆಡಿಟೋರಿಯಂ ಆವರಣದಲ್ಲಿ ಆರ್ಗನ್‌ಟ್ರಾನ್ ವಾಂಟ್ ಬಗ್ಗೆ, ಮುಂದುವರಿದ ವೈದ್ಯಕೀಯ ಶಿಕ್ಷಣ ಕಾರ್ಯಾಗಾರದಲ್ಲಿ ಪಾಲ್ಗೊಳ್ಳುವರು. ನಂತರ ಮಧ್ಯಾಹ್ನ 2 ರಿಂದ 6 ಗಂಟೆವರೆಗೆ ಕುರ್ತಕೋಟೆ, ಅಂತೂರ-ಬೆಂತೂರ, ಚಿಂಚಲಿ ಹಾಗೂ ಹರ್ತಿಯಲ್ಲಿ ರಸ್ತೆ ಸುಧಾರಣೆ ಕಾಮಗಾರಿಯ ಭೂಮಿ ಪೂಜೆ ನೆರವೇರಿಸಿ, ಗದಗನಲ್ಲಿ ವಾಸ್ತವ್ಯ ಮಾಡುವರು.

ಸೆ. 28 ರಂದು ಬೆಳಿಗ್ಗೆ 11ಗಂಟೆಗೆ ಗದಗನ ಜಿ.ಎನ್ .ಟಿ.ಟಿ.ಎಫ್ ಆವರಣದಲ್ಲಿ ವಾರ್ಷಿಕೋತ್ಸವ ಹಾಗೂ ಇಂಜಿನಿಯರ್ಸ್ ದಿನ ಆಚರಣೆಯಲ್ಲಿ ಭಾಗವಹಿಸುವರು. ನಂತರ ಮಧ್ಯಾಹ್ನ 12.30 ಗಂಟೆಗೆ ತಬಲಾಯತಕಟ್ಟಿ ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಕೊಠಡಿಗಳ ಹಾಗೂ ದುರ್ಗಾದೇವಿ ಸಮುದಾಯ ಭವನದ ಉದ್ಘಾಟನೆ ಮತ್ತು ಸಿ.ಸಿ.ರಸ್ತೆ ಕಾಮಗಾರಿಯ ಭೂಮಿ ಪೂಜೆಯಲ್ಲಿ ಪಾಲ್ಗೊಳ್ಳುವರು. ಮ. 1 ಗಂಟೆಗೆ ದುರ್ಗಾದೇವಿ ದೇವಸ್ಥಾನ ಸೊರಟೂರಲ್ಲಿ ಶ್ರೀ ದುರ್ಗಾದೇವಿ ದಸರಾ ಮಹೋತ್ಸವದ ನಿಮಿತ್ತ ಸರ್ವಧರ್ಮಗಳ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.



ಗದಗ: ಜನಸಂಘದ ಸಂಸ್ಥಾಪಕರಾದ ಪಂಡಿತ್ ದೀನದಯಾಳ್ ಉಪಾಧ್ಯಾಯ ಅವರ ಜಯಂತಿಯನ್ನು ನಗರದ ವಾರ್ಡ್ ನಂ. 26 ಬೂತ್ ನಂ. 91ರ ಅಧ್ಯಕ್ಷ ರಾಚಯ್ಯ ಎಸ್ ಹೊಸಮಠ ಅವರ ನಿವಾಸದಲ್ಲಿ ಕುಟುಂಬ ಸಮೇತ ಧ್ವಜಾರೋಹಣ ನೆರವೇರಿಸಿ ಪಂಡಿತ್ ದೀನದಯಾಳ್ ಉಪಾಧ್ಯಾಯ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

### ಸಮೀಕ್ಷೆಗೆ ನಿಯೋಜಿತ ಮೇಲ್ವಿಚಾರಕರ, ನಿಯೋಜಿತ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ

# ಉದಾಸೀನತೆ ತೋರುವವರ ವಿರುದ್ಧ ಶಿಸ್ತು ಕ್ರಮ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಾರ್ವಜನಿಕ ಅಭಿವೃದ್ಧಿಯ ಹಿತಾಸಕ್ತಿಯಿಂದ ರಾಜ್ಯ ಸರ್ಕಾರವು ಕೈಗೊಂಡಿರುವ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ನಿಯೋಜಿಸಿರುವ ಶಾಲಾ ಶಿಕ್ಷಣ, ಮಹಾನಗರ ಪಾಲಿಕೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ಸಮೀಕ್ಷೆಗೆ ಹಾಜರಾಗಿ ಕರ್ತವ್ಯ ನಿರ್ವಹಿಸಬೇಕು. ಸಮೀಕ್ಷೆದಾರರಿಗೆ ಅಗತ್ಯವಿರುವ ತರಬೇತಿ, ಸಹಕಾರಕ್ಕೆ ಜಿಲ್ಲಾಡಳಿತ ಸಿದ್ಧವಿದೆ. ಆದರೂ ನೆಪ ಹೇಳುವ, ಕರ್ತವ್ಯದಲ್ಲಿ ನಿರ್ಲಕ್ಷ್ಯ ಮತ್ತು ಉದಾಸೀನತೆ ತೋರುವವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಆಯಾ ಇಲಾಖೆ ಮುಖ್ಯಸ್ಥರಿಗೆ ಹಾಗೂ ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಾಗಿ ಸಮೀಕ್ಷೆಯ ಜಿಲ್ಲಾ ಸಮನ್ವಯ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಅವರು ಶುಕ್ರವಾರ ಮಧ್ಯಾಹ್ನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ನಿಯೋಜಿಸಿರುವ ಜಿಲ್ಲೆಯ ಎಲ್ಲ ಮೇಲ್ವಿಚಾರಕರ ಹಾಗೂ ನಿಯೋಜಿತ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ಜರುಗಿಸಿ, ಸಮೀಕ್ಷೆಯ ಪ್ರಗತಿ ಪರಿಶೀಲನೆ ಮಾಡಿ ಮಾತನಾಡಿದರು.

ರಾಜ್ಯ ಸರ್ಕಾರದ ನಿರ್ದೇಶನದಂತೆ ಜಿಲ್ಲೆಯಲ್ಲಿ ಸೆ.22ರಿಂದ ಸಮೀಕ್ಷೆ ಆರಂಭವಾಗಿದೆ. ಸಮೀಕ್ಷೆಯಲ್ಲಿ ಆರಂಭಿಕವಾಗಿ ತಾಂತ್ರಿಕ ಸಮಸ್ಯೆಗಳು ಕಂಡುಬಂದರೂ, ತಕ್ಷಣ ಸಂಬಂಧಿಸಿದ ಸಿಬ್ಬಂದಿ ಹಾಗೂ ತಾಂತ್ರಿಕ ಸಮಾಲೋಚಕರು ಪರಿಹರಿಸಿದ್ದಾರೆ. ಹಿಂದುಳಿದ ವರ್ಗಗಳ ಆಯೋಗದಿಂದ ಸಮೀಕ್ಷೆಗಾಗಿ ಹೊಸ 3.5 ಆ್ಯಪ್‌ನ್ನು ಸಹ ಬಿಡುಗಡೆ ಮಾಡಿ, ಪ್ರತಿ ಸಮೀಕ್ಷೆದಾರರು ತಮ್ಮ ಮೊಬೈಲ್‌ನಲ್ಲಿ ಅಳವಡಿಸಿಕೊಳ್ಳಲು ಅವಕಾಶ ನೀಡಲಾಗಿದೆ. ಈಗ ಯಾವುದೇ ರೀತಿಯ ಓಟಿಪಿ ಸಮಸ್ಯೆ ಇಲ್ಲ. ಆದಾಗ್ಯೂ ಇವತ್ತಿನವರೆಗೆ ನಿಗದಿತ ಗುರಿಯ ಪ್ರಕಾರ ಸಮೀಕ್ಷೆಯಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಪ್ರಗತಿ ಕಾಣುತ್ತಿಲ್ಲ ಎಂದು ಅವರು ಸಭೆಯಲ್ಲಿ ಅಸಮಾಧಾನ ವ್ಯಕ್ತಪಡಿಸಿದರು.



ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಸಮೀಕ್ಷೆದಾರರಿಗೆ ಸಮೀಕ್ಷೆ ಆರಂಭವಾಗುವ ಪೂರ್ವದಲ್ಲಿಯೇ ಮಾಹಿತಿ ನೀಡಿ, ಸಮೀಕ್ಷೆಗೆ ಆದೇಶ ಪತ್ರ ನೀಡಲಾಗಿದೆ. ಪ್ರತಿ ದಿನ ಎಲ್ಲ ಸಮೀಕ್ಷೆದಾರರಿಗೆ ಅವರ ಮೇಲ್ವಿಚಾರಕರ ಮೂಲಕ ಅಗತ್ಯ ಮಾಹಿತಿ ಹಾಗೂ ಮಾರ್ಗದರ್ಶನವನ್ನು ನೀಡಲಾಗುತ್ತಿದೆ. ನಿಯೋಜನೆಗೊಂಡ ಅಧಿಕಾರಿ, ಸಿಬ್ಬಂದಿಗಳು ತಮಗೆ ವಹಿಸಿರುವ ಕರ್ತವ್ಯವನ್ನು ನಿಯಮಾನುಸಾರ ನಿರ್ವಹಿಸಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ನಿಯೋಜನೆಗೊಂಡಿರುವ ಮೇಲ್ವಿಚಾರಕರು ಹಾಗೂ ಸಮೀಕ್ಷೆದಾರರು ಸಮೀಕ್ಷಾ ಕಾರ್ಯವನ್ನು ಗಂಭೀರವಾಗಿ ಪರಿಗಣಿಸಿದಂತೆ ಕಾಣುತ್ತಿಲ್ಲ. ಪ್ರತಿ ಮೇಲ್ವಿಚಾರಕರು ತಮ್ಮ ಅಧೀನದಲ್ಲಿ ಕರ್ತವ್ಯ ನಿರ್ವಹಿಸುವ ಸಮೀಕ್ಷೆದಾರರನ್ನು ಸಂಪರ್ಕಿಸಿ, ಪ್ರತಿ ದಿನ ಬೆಳಿಗ್ಗೆ ಮತ್ತು ಸಂಜೆ ಸಮೀಕ್ಷೆಯ ಪ್ರಗತಿಯನ್ನು ಪರಿಶೀಲಿಸಿ, ಮಾರ್ಗದರ್ಶನ ಮಾಡಬೇಕು. ಪ್ರಗತಿ ಮಾಹಿತಿಯನ್ನು ಪಡೆದುಕೊಳ್ಳಬೇಕು. ಸಮೀಕ್ಷೆದಾರರಿಗೆ ಉಂಟಾಗುವ ಸಮಸ್ಯೆಗಳನ್ನು ತಮ್ಮ ಹಂತದಲ್ಲಿ ಅಥವಾ ತಹಸೀಲ್ದಾರ, ತಾಂತ್ರಿಕ ಸಮಾಲೋಚಕರ ನೆರವಿನಿಂದ ಬಗೆಹರಿಸಬೇಕು. ಕಾಲಮಿತಿಯಲ್ಲಿ ಗುರಿ ಸಾಧಿಸಬೇಕೆಂದು ಹೇಳಿದರು.

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ನಿಯೋಜನೆಗೊಂಡಿರುವ ಅಧಿಕಾರಿ ಮತ್ತು ಸಿಬ್ಬಂದಿಗಳು ಆಯಾ ಇಲಾಖೆಯ ಜಿಲ್ಲಾ ಮುಖ್ಯಸ್ಥರ ಹಾಗೂ ಜಿಲ್ಲಾಧಿಕಾರಿಗಳ ಪೂರ್ವಾನುಮತಿ ಪಡೆಯದೇ ಕೇಂದ್ರ ಸ್ಥಾನದಿಂದ ತೆರಳುವಂತಿಲ್ಲ, ರಜೆ ಹೋಗುವಂತಿಲ್ಲ. ತೀರಾ ಅನಿವಾರ್ಯ ಸಂದರ್ಭಗಳಿದ್ದಲ್ಲಿ ತಹಸೀಲ್ದಾರರನ್ನು ಸಂಪರ್ಕಿಸಿ ಲಿಖಿತ ಮನವಿ ನೀಡಿ, ಪರ್ಯಾಯವಾಗಿ ಸಮೀಕ್ಷೆದಾರರನ್ನು ನಿಯೋಜಿಸಿ, ಅನುಮತಿ ಪಡೆಯಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ವೇದಿಕೆಯಲ್ಲಿ ಪ್ರೊಬೇಷನರಿ ಐಎಎಸ್ ಅಧಿಕಾರಿ ರಿತಿಕಾ ವರ್ಮಾ, ಜಿ.ಪಂ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಿಲ್ಲಾ ನಗರಾಭಿವೃದ್ಧಿಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಬಾನುಮತಿ ಎಚ್ ಇದ್ದರು.

### ಅರ್ಹ ಪಡಿತರ ಚೀಟಿಗಳನ್ನು ರದ್ದುಗೊಳಿಸಿರುವ ಸರ್ಕಾರದ ಜನವಿರೋಧಿ ಕ್ರಮ ಖಂಡನೀಯ

# ಆಹಾರ ಇಲಾಖೆ ಕಚೇರಿಯೆದುರು ಸೆ.29ಕ್ಕೆ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರ ರಾಜ್ಯಾದಂತ 8 ಲಕ್ಷಕ್ಕೂ ಹೆಚ್ಚು ಬಡವರ ಬಿ.ಪಿ.ಎಲ್ ಪಡಿತರ ಚೀಟಿಗಳನ್ನು ಏಕಾಏಕಿಯಾಗಿ ರದ್ದುಗೊಳಿಸಿದ್ದರಿಂದ ಲಕ್ಷಾಂತರ ಬಡ ಕುಟುಂಗಳು ಬೀದಿಗೆ ಬಂದಿದ್ದಾರೆ. ಗದಗ-ಬೆಟಗೇರಿ ಶಹರದ 2304 ಕಾರ್ಡ್‌ಗಳು ಮತ್ತು ಗದಗ ಗ್ರಾಮೀಣ ಭಾಗದ 1478 ಕಾರ್ಡ್‌ಗಳನ್ನು ರದ್ದುಗೊಳಿಸಿದ್ದಾರೆ. ರಾಜ್ಯ ಸರ್ಕಾರದ ಇಂತಹ ಜನವಿರೋಧಿ ಕ್ರಮವನ್ನು ಖಂಡಿಸಿ ಸ್ಲಂ ಜನಾಂದೋಲನ-ಕರ್ನಾಟಕ ಸಹಕಾರದಲ್ಲಿ ಸೆ.29ರಂದು ಆಹಾರ ಇಲಾಖೆ ಕಚೇರಿಯೆದುರು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಸೂಚನೆಯಂತೆ ಅನರ್ಹ ಪಡಿತರ ಚೀಟಿಗಳನ್ನು ಮಾತ್ರ ರದ್ದುಗೊಳಿಸಲಾಗುತ್ತದೆ ಎಂದು ರಾಜ್ಯದ ಮುಖ್ಯಮಂತ್ರಿಗಳು ಹೇಳುತ್ತಿದ್ದಾರೆ. ಉಳ್ಳವರ ಪಡಿತರ ಚೀಟಿಗಳನ್ನು ಅಧಿಕಾರಿಗಳು ಪತ್ತೆ ಹಚ್ಚಿ ರದ್ದುಗೊಳಸಲಿ. ಆದರೆ ಅಧಿಕಾರಿಗಳು ಯಾವುದೇ ಸಮೀಕ್ಷೆಯನ್ನು ನಡೆಸದೇ, ಮುಂಚಿತವಾಗಿ ಫಲಾನುಭವಿಗಳಿಗೆ ನೋಟಿಸ್ ನೀಡದೇ ಏಕಾಏಕಿಯಾಗಿ ಸಾವಿರಾರು ಕಾರ್ಡ್‌ಗಳನ್ನು ರದ್ದುಗೊಳಿಸಿರುವ ಕ್ರಮ ಖಂಡನೀಯ ಎಂದರು.




ಒಂದು ವೇಳೆ ಸರ್ಕಾರದ ಮಾರ್ಗಸೂಚಿಯಂತೆ ಕಾರ್ಡ್‌ಗಳನ್ನು ರದ್ದುಗೊಳಿಸಬೇಕಾದರೆ ಫಲಾನುಭವಿಗಳಿಗೆ ನೋಟಿಸ್ ನೀಡಿ ದಾಖಲೆಗಳನ್ನು ಪರೀಶಿಲನೆ ಮಾಡುವ ಅವಕಾಶ ನೀಡಬೇಕಾಗಿತ್ತು. ಆದರೆ ಆಹಾರ ಇಲಾಖೆ ಅಧಿಕಾರಿಗಳು ಕಚೇರಿಯಲ್ಲಿಯೇ ಕುಳಿತು ಸರ್ಕಾರದ ಮಾರ್ಗಸೂಚಿಯನ್ನು ಗಾಳಿಗೆ ತೂರಿ ಸಾವಿರಾರು ಬಡ ಕುಟುಂಬಗಳ ಕಾರ್ಡ್‌ಗಳನ್ನು ರದ್ದುಗೊಳಿಸಿದ್ದಾರೆ. ಈಗಾಗಲೇ ರದ್ದುಗೊಂಡಿರುವ ಕಾರ್ಡ್‌ಗಳನ್ನು ಪುನಃ ನಡೆಸಲು ಆಗ್ರಹಿಸಿ ಹೋರಾಟ ಹಮ್ಮಿಕೊಂಡಿದ್ದೇವೆ ಎಂದು ಇಮ್ತಿಯಾಜ್ ಮಾನ್ವಿ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಶರಣಪ್ಪ ಸೂಡಿ, ಮೌಲಾಸಾಬ ಗಚ್ಚಿ, ಮೆಹಬೂಬಸಾಬ ಬಳ್ಳಾರಿ, ಸಲೀಮ ಹರಿಹರ, ಮಂಜುನಾಥ ಶ್ರೀಗಿರಿ, ಮಕ್ತುಮಸಾಬ ಮುಲ್ಲಾನವರ, ರವಿ ಗೋಸಾವಿ ಮುಂತಾದವರು ಉಪಸ್ಥಿತರಿದ್ದರು.


* * * * * * *

## ಧರ್ಮದ ಕಾಲಂನಲ್ಲಿ ಹಿಂದೂ ಎಂದು ನಮೂದಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ವರ್ಗಗಳ ಆಯೋಗದಿಂದ ಆರಂಭವಾದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ಪಂಚಮಸಾಲಿ ಸಮಾಜ ಬಾಂಧವರು ಧರ್ಮದ ಕಾಲಂನಲ್ಲಿ ಹಿಂದೂ, ಜಾತಿ ಕಾಲಂನಲ್ಲಿ ಲಿಂಗಾಯತ ಪಂಚಮಸಾಲಿ ಎಂದು ಬರೆಸಬೇಕು ಅಂತ ಅಖಿಲ ಭಾರತ ಪಂಚಮಸಾಲಿ ಸಮಾಜದ ಗದಗ ಜಿಲ್ಲಾ ಮಹಿಳಾ ಅಧ್ಯಕ್ಷೆ ಸ್ವಾತಿ ಅಕ್ಕಿ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಹಿಂದೂ ಧರ್ಮ ಬರೆಸುವ ಕುರಿತು ಯಾವುದೇ ಗೊಂದಲ ಬೇಡ. ಈಗಾಗಲೇ ನಮ್ಮ ಶ್ರೀಗಳು ಧರ್ಮದ ಕಾಲಂನಲ್ಲಿ ಹಿಂದೂ ಎಂಬುದಾಗಿ ಬರೆಸಬೇಕೆಂದು ಹೇಳಿದ್ದಾರೆ. ವೀರಶೈವ ಲಿಂಗಾಯತರು ಸಾಮಾಜಿಕವಾಗಿ ಒಂದು ಧರ್ಮದ ಕಾಲಂನಲ್ಲಿ ಹಿಂದೂ ಅಂತಲೇ ಬರೆಸಬೇಕು. ಈ ವಿಚಾರದಲ್ಲಿ ಲಿಂಗಾಯತ ಪಂಚಮಸಾಲಿ ಬಾಂಧವರಲ್ಲಿ ಯಾವುದೇ ಗೊಂದಲವೂ ಇಲ್ಲ.



ಇದು ಕೇವಲ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಅಲ್ಲ. ಇದರಲ್ಲಿ ರಾಜಕೀಯವೂ ಇದೆ. ಲಿಂಗಾಯತರನ್ನು ಒಡೆಯುವ ವ್ಯವಸ್ಥಿತ ಹುನ್ನಾರ ಕೂಡ ನಡೆಯುತ್ತಿದೆ. ಈ ಬಗ್ಗೆ ಎಚ್ಚೆತ್ತುಕೊಳ್ಳಬೇಕು. ನಮ್ಮ ಸಮುದಾಯದ ಸಂಖ್ಯೆಯು ಗಣತಿಯಲ್ಲಿ ಕಡಿಮೆಯಾದರೆ ನಮಗೆ ಸಿಗುವಂತಹ ಮೀಸಲಾತಿಯ ಪ್ರಮಾಣವೇ ಕಡಿಮೆಯಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಜಾತಿಗಣತಿಯ ಸಮೀಕ್ಷೆ ಕಾರ್ಯ ಈಗಾಗಲೇ ರಾಜ್ಯಾದ್ಯಂತ ನಡೆದಿದೆ. ಗದಗ ಜಿಲ್ಲೆಯಲ್ಲಿ ಸರ್ವರ್ ಸಮಸ್ಯೆ ಕಾಡುತ್ತಿದ್ದು, ಶಿಕ್ಷಕರು ತೆ-ೂಂದರೆ ಅನುಭವಿಸುತ್ತಿದ್ದಾರೆ. ಈ ಕೂಡಲೇ ರಾಜ್ಯ ಸರ್ಕಾರ ಸರ್ವರ್ ಸಮಸ್ಯೆಯನ್ನು ಬಗೆಹರಿಸಬೇಕು. ಇಲ್ಲದಿದ್ದರೆ ಸಮೀಕ್ಷೆ ಕಾರ್ಯವನ್ನು ಇನ್ನಷ್ಟು ದಿನ ಮುಂದೂಡಬೇಕು ಎಂದು ಸ್ವಾತಿ ಅಕ್ಕಿ ಹೇಳಿದ್ದಾರೆ.

### ಸಮೀಕ್ಷೆ ಕಾರ್ಯದಲ್ಲಿ ಹತ್ತಾರು ತೊಡಕು | ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದಿಂದ ತಹಸೀಲ್ದಾರಿಗೆ ಮನವಿ

# ಕೂಡಲೇ ತಾಂತ್ರಿಕ ಸಮಸ್ಯೆ ಬಗೆಹರಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದಲ್ಲಿ ಪ್ರಾರಂಭವಾಗಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯದಲ್ಲಿ ತಾಂತ್ರಿಕ ಸಮಸ್ಯೆಗಳಿಂದ ಕಾರ್ಯವು ಸರಿಯಾಗಿ ಆಗದೆ ಜನರಿಂದ ನಗೆಪಾಟಲಿಗೆ ಈಡಾಗುತ್ತಿದ್ದು, ಕೂಡಲೇ ತಾಂತ್ರಿಕ ಸಮಸ್ಯೆ ಬಗೆಹರಿಸಬೇಕು, ಇಲ್ಲವೆ ಸಮಸ್ಯೆ ಬಗೆಹರಿಯುವವರೆಗೂ ಗಣತಿ ಕಾರ್ಯವನ್ನು ಮುಂದೂಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದವರು ಗುರುವಾರ ತಹಸೀಲ್ದಾರಿಗೆ ಮನವಿ ಸಲ್ಲಿಸಿದರು.

ಪ್ರತಿ ಮನೆಗೂ ಲೊಕೇಷನ್ ಹಾಕಿಕೊಂಡು ಹುಡುಕುವುದು ಕಷ್ಟವಾಗುತ್ತಿದೆ. ಸಮೀಕ್ಷೆಯಲ್ಲಿ 60 ಪ್ರಶ್ನೆಗಳನ್ನು ಆ್ಯಪ್‌ನಲ್ಲಿ ತುಂಬುವದು ಸಹ ಕಷ್ಟವಾಗುತ್ತಿದೆ. ಓರ್ವ ಶಿಕ್ಷಕರಿಗೆ 150-175 ಮನೆಗಳನ್ನು ನೀಡಲಾಗಿದ್ದು, ತಾಂತ್ರಿಕ ಸಮಸ್ಯೆ ಹೀಗೇ ಇದ್ದರೆ ಕನಿಷ್ಠ 1-2 ತಿಂಗಳು ಬೇಕಾಗುತ್ತದೆ. ಅಲ್ಲದೆ ಡಾಟಾ ಸಹ ಹೆಚ್ಚು ಬೇಕಾಗುತ್ತಿದ್ದು, ಲೊಕೇಷನ್ ಮ್ಯಾಪ್ ನೀಡಿ ಹುಡುಕುವ ಬದಲು ಮತಗಟ್ಟೆ ಲಿಸ್ಟ್ ನೀಡಿ ಸಮೀಕ್ಷೆ ನಡೆಸಲು ಸೂಚಿಸಿದರೆ ಸುಲಭ ಆಗುತ್ತಿತ್ತು ಎಂದು ಶಿಕ್ಷಕರು ಮನವಿಯಲ್ಲಿ ಅಳಲು ತೋಡಿಕೊಂಡಿದ್ದಾರೆ.



ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಪದಾಧಿಕಾರಿಗಳು, ಸಮೀಕ್ಷೆಗೆ ನೀಡಲಾಗುವ ಹೊಸ ವರ್ಷನ್ ಅಪ್ಲಿಕೇಶನ್ ಕಾರ್ಯ ನಿರ್ವಹಿಸದಿರುವುದು, ನಿಯೋಜಿಸಿರುವ ಮನೆಗಳ ಲೊಕೇಶನ್ ಸಿಗದೇ ಇರುವುದು, ನಿಗದಿಪಡಿಸಿರುವ ಮನೆಗಳು ಒಂದೇ ಕಡೆ ಇಲ್ಲದಿರುವುದು, ಮನೆ ಸಮೀಕ್ಷೆ ಮಾಡಿದ ನಂತರ ಸಬ್ಮಿಟ್ ಆಗದೇ ಇರುವುದು, ಓಟಿಪಿ ಸಮಸ್ಯೆ ಹೀಗೆ ಹತ್ತು ಹಲವಾರು ತಾಂತ್ರಿಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಈ ಸಾಮಾಜಿಕ ಮತ್ತು ಆರ್ಥಿಕ ಗಣತಿಯ ಎಲ್ಲ ಸಮಸ್ಯೆಗಳನ್ನು ಪರಿಹರಿಸುವವರೆಗೂ ಮುಂದೂಡುವಂತೆ ಮನವಿ ಮಾಡಿದರು.

ಎಲ್ಲ ತಾಂತ್ರಿಕ ಸಮಸ್ಯೆಗಳು ಬಗೆಹರಿಯುವರೆಗೆ ಸಮೀಕ್ಷೆ ಮುಂದೂಡಿ ದಸರಾ ಹಬ್ಬವನ್ನು ಆಚರಿಸಲು ಶಿಕ್ಷಕರಿಗೆ ಅನುಕೂಲ ಮಾಡಿಕೊಡಬೇಕು ಹಾಗೂ ಆರೋಗ್ಯ ಸಮಸ್ಯೆ, ವಿಕಲಚೇತನರಿಗೆ ಹಾಗೂ ನಿವೃತ್ತಿಯ ಅಂಚಿನಲ್ಲಿರುವರಿಗೆ ವಿನಾಯತಿ ನೀಡಬೇಕೆಂದು ಮನವಿ ಸಲ್ಲಿಸಿದರು.

ಕ.ರಾ.ಸ.ನೌ ಸಂಘದ ತಾಲೂಕಾಧ್ಯಕ್ಷ ಗುರುರಾಜ ಹವಳದ, ಎಮ್.ಎ. ನದಾಫ್, ಎಮ್.ಡಿ. ವಾರದ, ಬಿ.ಎಮ್. ಯರಗುಪ್ಪಿ, ಪ್ರಶಾಂತ ಸನದಿ, ಎಮ್.ಎಸ್. ಹಿರೇಮಠ, ಎಲ್. ಎನ್. ನಂದೆಣ್ಣವರ, ಡಿ.ಡಿ. ಲಮಾಣಿ, ಗೀತಾ ಹಳ್ಯಾಳ, ಎಚ್.ಡಿ. ನಿಂಗರಡ್ಡಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ ಶಿಕ್ಷಕರು, ನೌಕರರು ಹಾಜರಿದ್ದರು.

ಕವನ

## ನವರಾತ್ರಿ

ಶ್ರೇಷ್ಠ ಸಾಹಿತಿ ಎಸ್.ಎಲ್. ಬೈರಪ್ಪನವರಿಗೊಂದು ನುಡಿನಮನ
ಸಾರಸ್ವತ ಲೋಕದ ಮೇರು ಪರ್ವತ
ಸಾರಸ್ವತ ಲೋಕದ ಮೇರುಪರ್ವತ ಎಸ್.ಎಲ್. ಬೈರಪ್ಪ
ನೇರ ನಿಷ್ಟುರ, ನಿರ್ಭೀತ, ಚಿಂತನಶೀಲ ಲೇಖಕ

ಬಡತನದಲ್ಲಿ ಮಿಂದೆದ್ದರೂ ಸಾಹಿತ್ಯದಲ್ಲಿ ಸಿರಿವಂತ
ವಾಸ್ತವಿಕ ಜಗತ್ತನ್ನು ಕಾದಂಬರಿ ಮೂಲಕ ತೋರಿಸಿದ ಮಾಂತ್ರಿಕ

ಧರ್ಮಶ್ರೀ ಮೂಲಕ ಧರ್ಮರಕ್ಷಣೆಗೆ ಹಾತೊರೆದ ನಾಯಕ
ಪದ್ಮಭೂಷಣ, ಸರಸ್ವತಿ ಸಮ್ಮಾನ ಪ್ರಶಸ್ತಿ ಪುರಸ್ಕೃತ

ದೇಶಭಕ್ತ, ಸೃಜನಶೀಲ, ವಿಶಿಷ್ಟ ಬರಹಗಾರ
ಸಾಹಿತ್ಯದ ಲೋಕದಲ್ಲಿ ಇವರ ಹೆಸರ ಅಜರಾಮರ

ಒಂದೊಂದು ಕಾದಂಬರಿಯಲ್ಲೂ ಒಂದೊಂದು ಸಂದೇಶ
ಸಾಹಿತ್ಯದ ವಂಶವೃಕ್ಷಕ್ಕೆ ನೀರೆರೆದ ಮಹಾನುಭಾವ

ಹಲವಾರು ಭಾಷೆ ಓದುಗ ಅಭಿಮಾನಿಗಳ ಕಣ್ಮಣಿ
ಕನ್ನಡಾಂಬೆಯ ಜನರೆಲ್ಲರೂ ಇವರಿಗೆ ಚಿರಋಣಿ

ಬಲಪಂಥೀಯ ಭೀಮಕಾಯದ ಹಿರಿಯ ಸಾಹಿತಿ
ಅಷ್ಟ ದಿಕ್ಕುಗಳಲ್ಲಿ ಹರಡಿತ್ತು ಇವರ ಜ್ಞಾನದ ಕೀರ್ತಿ

ಇಂದಿನ ಸಾಹಿತಿಗಳಿಗೆ ಕಾದಂಬರಿ ಭೀಷ್ಮನ ಆದರ್ಶಗಳು ದಾರಿದೀಪವಾಗಲಿ
ಭಗವಂತನು ಬೈರಪ್ಪನವರ ಆತ್ಮಕ್ಕೆ ಚಿರಶಾಂತಿ ನೀಡಲಿ

**– ಅಂಜನಾ ರಾಘವೇಂದ್ರ ಕುಬೇರ.**
**ಗದಗ.**



ಗದಗ: ದಸರಾ ಹಬ್ಬದ ಸಂಭ್ರಮದ ಅಂಗವಾಗಿ ಇಲ್ಲಿನ ಮುಳಗುಂದ ರಸ್ತೆಯ ಸಿದ್ದಗಂಗಾ ನಗರದ ದುರ್ಗಾಪರಮೇಶ್ವರಿ ಮಹಿಳಾ ಗ್ರೂಪ್‌ನ ಸದಸ್ಯರು ನಾಲ್ಕನೇ ದಿನದಂದು ಹಳದಿ ವರ್ಣದ ಸೀರೆಯನ್ನುಟ್ಟು ಸಂಭ್ರಮಿಸಿದರು.

### ಗದಗ ಎಸ್‌ಎಸ್‌ಕೆ 'ನಮ್ಮೂರ ದಸರಾ-2025'ರ 4ನೇ ದಿನದ ಕಾರ್ಯಕ್ರಮದಲ್ಲಿ ಡಾ. ಸಂಕನೂರ ಅಭಿಮತ

# ಹಿಂದೂ ಸಂಸ್ಕೃತಿಯನ್ನು ಅಳಿಸಲು ಸಾಧ್ಯವಿಲ್ಲ

**■ವಿಜಯಸಾಕ್ಷಿ ಸುದ್ದಿ, ಗದಗ**

ನಮ್ಮ ದೇಶವನ್ನು ಬಹಳಷ್ಟು ಮುಸ್ಲಿಂ ರಾಜರು, ಬ್ರಿಟಿಷರು ನೂರಾರು ವರ್ಷಗಳ ಕಾಲ ಆಳಿ ಹೋದರೂ ನಮ್ಮ ಹಿಂದೂ ಸಂಸ್ಕೃತಿಯನ್ನು ಅಳಿಸಲು ಯಾರಿಂದಲೂ ಸಾಧ್ಯವಾಗಲಿಲ್ಲ ಎಂದು ಖ್ಯಾತ ವೈದ್ಯ ಡಾ. ಪ್ರಕಾಶ ಸಂಕನೂರ ಅಭಿಪ್ರಾಯಪಟ್ಟರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರ್ಬಾರ ವೇದಿಕೆಯಲ್ಲಿ ಜರುಗಿದ ನಮ್ಮೂರ ದಸರಾ-2025ರ 4ನೇ ದಿನದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ನಮ್ಮ ಅಖಂಡ ಭಾರತವನ್ನು ಒಂದುಗೂಡಿಸಲು ನಮ್ಮ ಹಿಂದೂ ಸಂಸ್ಕೃತಿ ಮೂಲ ಕಾರಣವಾಗಿದೆ. ಇತ್ತೀಚಿನ ದಿನಗಳಲ್ಲಿ ನಮ್ಮ ಹಿಂದೂ ಸಂಸ್ಕೃತಿಯನ್ನು ವಿದೇಶಿಗರು ಹೆಚ್ಚಿನ ಸಂಖ್ಯೆಯಲ್ಲಿ ಅಪ್ಪಿಕೊಳ್ಳುತ್ತಿದ್ದಾರೆ. ಇದಕ್ಕೆ ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಶ್ರೇಷ್ಠವಾದ ನಮ್ಮ ಹಿಂದೂ ಸಂಸ್ಕೃತಿಯ ಆಚಾರ-ವಿಚಾರಗಳು ಕಾರಣವಾಗಿವೆ ಎಂದು ಹೇಳಿದರು.

ಎಸ್‌ಎಸ್‌ಕೆ ಸಮಾಜದ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವೇದಿಕೆ ಮೇಲೆ ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ, ರವಿ ಶಿದ್ಲಿಂಗ, ದಸರಾ ಕಮಿಟಿ ಚೇರಮನ್ ಅನಿಲ ಖಟವಟೆ ಉಪಸ್ಥಿತರಿದ್ದರು.



ಹಿರಿಯ ಮೋಟಾರ್ ವಾಹನ ನಿರೀಕ್ಷಕ ಅರುಣ ಕಟ್ಟಿಮನಿ ಮಾತನಾಡಿ, ಯಾರಾದರೂ ಸಂಪತ್ತನ್ನು ಹೊಂದಿದ್ದರೆ ಅವರು ಆರೋಗ್ಯವನ್ನು ಹುಡುಕುತ್ತಾ ಹೋಗುತ್ತಾರೆ. ಆದರೆ, ಯಾರಲ್ಲಾದರೂ ಉತ್ತಮ ಆರೋಗ್ಯವಿದ್ದರೆ ಅವರ ಹತ್ತಿರ ಸಂಪತ್ತು ಹುಡುಕಿಕೊಂಡು ಬರುತ್ತದೆ. ಅದ್ದರಿಂದ ನಾವು ಸಂಪತ್ತು ಗಳಿಸುವ ಒತ್ತಡದಲ್ಲಿ ನೆಮ್ಮದಿಯನ್ನು ಕಳೆದುಕೊಳ್ಳುತ್ತಿದ್ದೇವೆ. ಸಮಯ ಸಿಕ್ಕಾಗ ದೇವರ ಭಜನೆ, ಪ್ರಾರ್ಥನೆ ಮಾಡುವ ಮೂಲಕ ನೆಮ್ಮದಿ ಕಾಣಬಹುದು. ಅಂತಹ ಶಕ್ತಿ ಪ್ರಾರ್ಥನೆಯಲ್ಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಂಚ ಕಮಿಟಿ ಸದಸ್ಯರಾದ ವಿಶ್ವನಾಥಸಾ ಖಟವಟೆ, ಸುರೇಶಕುಮಾರ ಬದಿ, ಬಲರಾಮ ಬಸವಾ, ಪರಶುರಾಮ ಬದಿ, ವಿಷ್ಣುಸಾ ಶಿದ್ಲಿಂಗ, ಶ್ರೀನಿವಾಸ ಬಾಂಡಗೆ, ಮಾರುತಿ ಪವಾರ, ಪ್ರಕಾಶ ಬಾಕಳೆ, ಅಂಬಾಸಾ ಖಟವಟೆ, ಗಣಪತಿ ಜಿತೂರಿ, ವಿನೋದ ಬಾಂಡಗೆ, ತರುಣ ಸಂಘದ ವಿಶ್ವನಾಥಸಾ ಸೂಳಂಕಿ, ರಾಘು ಬಾರಡ, ಶ್ರೀಕಾಂತ ಬಾಕಳೆ, ಸುಧೀರ ಕಾಟಿಗರ, ಅಶೋಕ ಬೇವಿನಕಟ್ಟಿ, ವೆಂಕಟೇಶ ಹಬೀಬ, ಮಾಧು ಬದಿ, ನಾಗರಾಜ ಖೋಡೆ, ಮಹಿಳಾ ಮಂಡಳದ ಅಧ್ಯಕ್ಷೆ ಉಮಾಬಾಯಿ ಬೇವಿನಕಟ್ಟಿ, ಗೀತಾಬಾಯಿ ಹಬೀಬ ಮುಂತಾದವರು ಉಪಸ್ಥಿತರಿದ್ದರು.

ಗಂಗಾಧರ ಹಬೀಬ ಸ್ವಾಗತಿಸಿದರು. ಜಿ.ಎನ್. ಹಬೀಬ ನಿರೂಪಿಸಿದರು. ಮೋತಿಲಾಲಸಾ ಪೂಜಾರಿ ವಂದಿಸಿದರು.

# 14ನೇ ವರ್ಷದ ಪೌರ ಕಾರ್ಮಿಕರ ದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆ ಕರ್ನಾಟಕ ರಾಜ್ಯ ಪೌರ ಕಾರ್ಮಿಕರ ಮಹಾ ಸಂಘ ಹಾಗೂ ಪೌರ ನೌಕರರ ಸಂಘಗಳ ಸಂಯುಕ್ತ ಆಶ್ರಯದಲ್ಲಿ 14ನೇ ವರ್ಷದ ಪೌರ ಕಾರ್ಮಿಕರ ದಿನಾಚರಣೆಯನ್ನು ನಗರಸಭೆ ಆವರಣದಲ್ಲಿ ಆಚರಿಸಲಾಯಿತು.

ದಿನಾಚರಣೆಯ ಅಂಗವಾಗಿ ಪೌರಕಾರ್ಮಿಕರ ಕ್ರೀಡಾಕೂಟನ್ನು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ ಉದ್ಘಾಟಿಸಿದರು. ಕೃಷ್ಣಾ ಪರಾಪೂರ, ಆನಂದ ಬದಿ, ರಾಘವೇಂದ್ರ ಯಳವತ್ತಿ, ಹೆಚ್.ಎ. ಬಂಡಿವಡ್ಡರ, ಹೇಮೇಶ ಯಟ್ಟಿ, ನಾಗೇಶ ಬಳ್ಳಾರಿ, ಸಣ್ಣರಾಮಪ್ಪ ಬಳ್ಳಾರಿ, ವೆಂಕಟೇಶ್ ಬಳ್ಳಾರಿ, ಪರಶುರಾಮ ಶೇರಖಾನೆ, ಎ.ಎನ್. ಮಣೇಕರ, ಎಸ್.ವಾಯ್. ಸಂಕನಗೌಡ್ರ, ಚಂದ್ರಶೇಖರ ಆರ್. ಹಾದಿಮನಿ, ಕೆಂಚಪ್ಪ ಪೂಜಾರ, ಅರವಿಂದ ಕುರ್ತಕೋಟಿ, ನಾಗವ್ವ ಮಲ್ಲಸಮುದ್ರ, ಲಕ್ಷ್ಮವ್ವ ನಡಗೇರಿ, ದುರಗವ್ವ ಹಾದಿಮನಿ, ಹನಮಂತಪ್ಪ ಚಲವಾದಿ, ಸಣ್ಣಪ್ಪ ಬೋಳಮ್ಮನವರ, ಮುತ್ತು ಚಲವಾದಿ, ಮಲ್ಲಿಕ ಸಂಗಾಪೂರ ಉಪಸ್ಥಿತರಿದ್ದರು.




ಕ್ರೀಡಾಕೂಟದ ಪುರುಷರ ವಿಭಾಗಗಲ್ಲಿ 100 ಮೀ ಓಟ-ಸಾಗರ ದೊಡ್ಡಮನಿ (ಪ್ರಥಮ), ಬಾಲು ದೊಡ್ಡಮನಿ (ದ್ವಿತೀಯ), ಮುತ್ತು ಪೂಜಾರ (ತೃತೀಯ), ಗುಂಡು ಎಸೆತ- ಸಂತೋಷ ಹಾದಿಮನಿ (ಪ್ರಥಮ), ಮಂಜುನಾಥ ಕಡಬೂರ (ದ್ವಿತೀಯ), ಹುಲಗಣ್ಣ ತೌಜಿನ (ತೃತೀಯ), ಚಕ್ರ ಎಸೆತ-ಪರಶುರಾಮ ಗುಡಿಮನಿ (ಪ್ರಥಮ), ಮಂಜುನಾಥ ಕಡಬೂರ (ದ್ವಿತೀಯ), ಸುದೀಪ ಬಿಳೆಯಲಿ (ತೃತೀಯ) ಬಹುಮಾನ ಪಡೆದುಕೊಂಡರು.

ಮಹಿಳೆಯರ ವಿಭಾಗದಲ್ಲಿ ಗುಂಡು ಎಸೆತ-ಲಲಿತಾ ಕಾಳೆ (ಪ್ರಥಮ), ರಾಧಾ ಹಾಲಿನವರ (ದ್ವಿತೀಯ), ಮಂಜುಳಾ ಕುಲಾಯಿ (ತೃತೀಯ), ಚಕ್ರ ಎಸೆತ-ಲಲಿತಾ ಕಾಳೆ (ಪ್ರಥಮ), ಮಂಜುಳಾ ಕುಲಾಯಿ (ದ್ವಿತೀಯ), ರಾಧಾ ಹಾಲಿನವರ (ತೃತೀಯ) ಬಹುಮಾನ ಪಡೆದರೆ, ಕಬಡ್ಡಿಯಲ್ಲಿ ಜೈ ಭೀಮ ಕಬಡ್ಡಿ ತಂಡ ಪ್ರಥಮ ಮತ್ತು ಜ್ಯೋತಿ ಫುಲೆ ತಂಡ ದ್ವಿತೀಯ ಸ್ಥಾನ ಪಡೆದುಕೊಂಡಿತು.

ಜೈ ಭೀಮ ಕಬಡ್ಡಿ ತಂಡದ ಷಣ್ಮುಖ ಬೋಳಮ್ಮನವರ, ಆನಂದ ದೊಡ್ಡಮನಿ, ಮಂಜುನಾಥ ಕಡಬೂರ, ನೀಲಪ್ಪ ಬೋಳಮ್ಮನವರ, ಸಂತೋಷ ಹಾದಿಮನಿ, ಬಾಲರಾಜ ದೊಡ್ಡಮನಿ, ಸಾಗರ ದೊಡ್ಡಮನಿ, ಜ್ಯೋತಿ ಫುಲೆ ಕಬಡ್ಡಿ ತಂಡದ ಭೀಮೇಶ ಯಟ್ಟಿ, ಹೆಗಡೆಪ್ಪ ಹೊಸಳ್ಳಿ, ಮಾಂತೇಶ ಮಣ್ಣಮ್ಮನವರ, ಮಂಜು ಸಿಕ್ಕಲಗಾರ, ಚಿದಾನಂದ ಮುಳಗುಂದ, ಸಿದ್ದಪ್ಪ ಬಿಳೆಯಲಿ, ಸಾಗರ ಹೊಸಳ್ಳಿ ಸೇರಿದಂತೆ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

# ವಾಲ್ಮೀಕಿ ಸಮುದಾಯದವರಿಂದ ಪ್ರತಿಭಟನೆ

**■ವಿಜಯಸಾಕ್ಷಿ ಸುದ್ದಿ, ರೋಣ**

ರಾಜ್ಯ ಸರಕಾರ ಪರಿಶಿಷ್ಠ ಪಂಗಡದಲ್ಲಿ ಅನ್ಯ ಜಾತಿಗಳನ್ನು ಸೇರಿಸಲು ಹೊರಟಿರುವುದು ಖಂಡನೀಯವಾಗಿದ್ದು, ಸರಕಾರ ಈ ಕಾರ್ಯದಿಂದ ಹಿಂದೆ ಸರಿಯಬೇಕು ಎಂದು ವಾಲ್ಮೀಕಿ ಸಮುದಾಯದ ಅಧ್ಯಕ್ಷ ಬಸವರಾಜ ತಳವಾರ ಹೇಳಿದರು.

ಅವರು ಗುರುವಾರ ವಾಲ್ಮೀಕಿ ಸಮಾಜದ ವತಿಯಿಂದ ಜರುಗಿದ ರಾಜ್ಯ ಸರಕಾರದ ಕ್ರಮವನ್ನು ವಿರೋಧಿಸಿ ನಡೆದ ಪ್ರತಿಭಟನಾ ಮೆರವಣಿಗೆಯ ನೇತೃತ್ವ ವಹಿಸಿ ಮಾತನಾಡಿದರು.

ರಾಜ್ಯದಲ್ಲಿರುವ ಪರಿಶಿಷ್ಠ ಪಂಗಡಗಳು ಅಭಿವೃದ್ಧಿಯಿಂದ ವಂಚಿತಗೊಂಡಿವೆ. ಹೀಗಿರುವಾಗ ರಾಜ್ಯ ಸರಕಾರ ಬೇರೆ ಜಾತಿಗಳನ್ನು ಎಸ್‌ಟಿ ಸಮುದಾಯಕ್ಕೆ ಸೇರಿಸುವ ಹುನ್ನಾರ ನಡೆಸಿರುವುದು ಖಂಡನೀಯ. ಈ ಕೂಡಲೇ ಸರಕಾರ ಹಿಂದೆ ಸರಿಯದಿದ್ದರೆ ಸಮಾಜ ಬಂಧುಗಳು ಉಗ್ರ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ಎಚ್ಚರಿಸಿದರು.

ಪುರಸಭೆ ಸದಸ್ಯ ಸಂತೋಷ ಕಡಿವಾಲ ಮಾತನಾಡಿ, ರಾಜ್ಯ ಸರಕಾರದ ಕ್ರಮ ವಾಲ್ಮೀಕಿ ಸಮುದಾಯವನ್ನು ಬಲಹೀನಗೊಳಿಸುವ ತಂತ್ರವಾಗಿದೆ. ಸರಕಾರ ತುಳಿತಕ್ಕೆ ಒಳಗಾದ ಸಮಾಜ ಮತ್ತು ಸಮುದಾಯಗಳ ಪರ ಇರಬೇಕೇ ಹೊರತು ಬಲಾಢ್ಯ ಸಮುದಾಯಗಳ ಪರವಾಗಿ ನಿಲ್ಲಬಾರದು. ಪರಿಶಿಷ್ಠ ಪಂಗಡಕ್ಕೆ ಯಾವ ಜನಾಂಗವನ್ನೂ ಸೇರ್ಪಡೆ ಮಾಡದೆ ವಾಲ್ಮೀಕಿ ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಆಗ್ರಹಿಸಿದರು.

ತಾಲೂಕಿನ ವಾಲ್ಮೀಕಿ ಸಮಾಜದ ನಾಗರಿಕರು ಪಟ್ಟಣದ ಸಿದ್ದಾರೂಢ ಮಠದಿಂದ ಪ್ರತಿಭಟನಾ ರ್‍ಯಾಲಿ ನಡೆಸಿದರು. ಸೂಡಿ ಕ್ರಾಸ್, ಮುಲ್ಲಾನಭಾವಿ, ಪೋತರಾಜನ ಕಟ್ಟೆಯ ಬಳಿ ಮಾನವ ಸರಪಳಿ ನಿರ್ಮಿಸಿ ರಾಜ್ಯ ಸರಕಾರದ ವಿರುದ್ಧ ಧಿಕ್ಕಾರ ಕೂಗಿದರು. ನಂತರ ಪ್ರತಿಭಟನಾ ನಿರತರು ತಹಸೀಲ್ದಾರ ನಾಗರಾಜ ಕೆ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕುಮಾರ ಗೌಡನ್ನವರ, ಶ್ರೀಧರ ನಾಯ್ಕ, ಹನ್ಮಂತ ತಳವಾರ, ಭೀಮಸಿ ತಳವಾರ, ಬಾಳಪ್ಪ ಪೂಜಾರ, ವೀರಣ್ಣ ತಳವಾರ, ಮಂಜು ಬಸರಕೋಡ ಮುಂತಾದವರಿದ್ದರು.




# ಉಚಿತ ಆರೋಗ್ಯ ತಪಾಸಣಾ ಶಿಬಿರ ನಾಳೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿ ವತಿಯಿಂದ ಬೆಟಗೇರಿಯಲ್ಲಿ ದೇಶದ ಪ್ರಧಾನಿ ನರೇಂದ್ರ ಮೋದಿಯವರ 75ನೇ ಜನ್ಮದಿನದ ಅಂಗವಾಗಿ ಸೆ. 28ರಂದು ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಬೆಟಗೇರಿಯ ಶ್ರೀ ಹಳೇ ಬನಶಂಕರಿ ದೇವಿ ಸಮುದಾಯ ಭವನದಲ್ಲಿ ಉಚಿತ ಆರೋಗ್ಯ ಶಿಬಿರವನ್ನು ಏರ್ಪಡಿಸಲಾಗಿದೆ.

ಈ ಶಿಬಿರದಲ್ಲಿ ಎಲುಬು-ಕಿಲು ತಜ್ಞರಾದ ಡಾ. ಪ್ರಕಾಶ ಸಂಕನೂರ, ಜನರಲ್ ಮೆಡಿಸಿನ್ ಡಾ. ಸಂದೀಪ ಕವಳಿಕಾಯಿ, ಜನರಲ್ ಸರ್ಜನ್ ಡಾ. ಆದಿತ್ಯ ಗೋಡಕಿಂಡಿ, ನೇತ್ರ ತಜ್ಞರಾದ ಡಾ. ವಿಜಯ ಸಜ್ಜನರ, ಪ್ರಸೂತಿ ತಜ್ಞರಾದ ಡಾ. ಚೈತ್ರಾ ಜಿತೇಂದರ, ಮೂಗು ಗಂಟಲು ತಜ್ಞರಾದ ಡಾ. ಚಂದ್ರಶೇಖರ ಬಳ್ಳಾರಿ, ಚಿಕ್ಕಮಕ್ಕಳ ತಜ್ಞರಾದ ಡಾ. ಜಿತೇಂದ್ರ ಲಿಂಗಾರೆಡ್ಡಿ, ದಂತ ತಜ್ಞರಾದ ಡಾ. ಕುಶಾಲ್ ಅಳ್ಳೊಳ್ಳಿ, ಚರ್ಮ ರೋಗ ತಜ್ಞರಾದ ಡಾ. ತುಕಾರಾಮ್ ಸೂರಿ, ಅರವಳಿಕೆ ತಜ್ಞರಾದ ಡಾ. ಶ್ವೇತಾ ಸಂಕನೂರ ಹಾಗೂ ಔಷಧಿ ವಿತರಣಾ ಸಂಚಾಲಕರಾದ ರಾಮನಗೌಡ ದಾನಪ್ಪಗೌಡ್ರ ಉಪಸ್ಥಿತರಿರುವರು.

ಬೆಟಗೇರಿಯ ಎಲ್ಲ ಸಾರ್ವಜನಿಕರು ಶಿಬಿರದ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಪ್ರಧಾನ ಕಾರ್ಯದರ್ಶಿ ಶಂಕರ ಕಾಕಿ, ಸುರೇಶ ಚಿತ್ತರಗಿ, ಕಾರ್ಯಕ್ರಮದ ಸಂಚಾಲಕ ರಾಘವೇಂದ್ರ ಯಳವತ್ತಿ, ಅನಿಲ ಅಬ್ಬಿಗೇರಿ, ಶಶಿಧರ ದಿಂಡೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯ ಮಟ್ಟದ ಅಣಕು ಸಂಸತ್ತು ಸ್ಪರ್ಧೆಗೆ ಆಯ್ಕೆ




**■ವಿಜಯಸಾಕ್ಷಿ ಸುದ್ದಿ, ಗದಗ**

ಜಗದ್ಗುರು ತೋಂಟದಾರ್ಯ ಪದವಿ ಪೂರ್ವ ಕಾಲೇಜ ಗದಗನಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆಯವರು ಏರ್ಪಡಿಸಿದ್ದ ಜಿಲ್ಲಾಮಟ್ಟದ ಅಣಕು ಸಂಸತ್ತು ಸ್ಪರ್ಧೆಯಲ್ಲಿ ಎಫ್ ಬಿ ಪೂಜಾರ್ ಸರ್ಕಾರಿ ಪದವಿ ಪೂರ್ವ ಕಾಲೇಜ ಶಿರಹಟ್ಟಿಯ ಕುಮಾರಿ ಮರಿಯಮ್ಮ ರಣತೂರ ಪ್ರಥಮ ಸ್ಥಾನ ಹಾಗೂ ಪ್ರಿಯಾಂಕ ಮಾನೆ ದ್ವಿತೀಯ ಸ್ಥಾನವನ್ನು ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಸದರಿ ವಿದ್ಯಾರ್ಥಿಗಳಿಗೆ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಕಾಲೇಜು ಅಭಿವೃದ್ಧಿ ಸಮಿತಿಯ ಸರ್ವ ಸದಸ್ಯರು ಹಾಗೂ ಪ್ರಾಚಾರ್ಯರಾದ ಬಿ.ಜಿ ಗಿರತಿಮಣ್ಣವರ್ ಮತ್ತು ಸಿಬ್ಬಂದಿಯವರು ಅಭಿನಂದನೆ ಸಲ್ಲಿಸಿ ಶುಭ ಹಾರೈಸಿದ್ದಾರೆ. ಈ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿ ನೀಡಿದ ರಾಜ್ಯಶಾಸ್ತ್ರದ ಉಪನ್ಯಾಸಕರಾದ ಶ್ರೀಮತಿ ರಾಜೇಶ್ವರಿ ಸಂಶಿ ಅವರಿಗೂ ಅಭಿನಂದನೆ ಸಲ್ಲಿಸಿ ರಾಜ್ಯಮಟ್ಟಕ್ಕೆ ಹೆಚ್ಚಿನ ತರಬೇತಿ ನೀಡಲು ಕೋರಲಾಯಿತು.

### ಭ್ರಷ್ಟಾಚಾರದಲ್ಲಿ ಮುಳಗಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಗದಗ ಬಿಜೆಪಿ ವತಿಯಿಂದ ಪ್ರತಿಭಟನೆ

# ಸರ್ಕಾರಕ್ಕೆ ಜನರ ಕೂಗು ಅರ್ಥವಾಗದು

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ರಸ್ತೆ ಗುಂಡಿಗಳನ್ನು ಮುಚ್ಚದೆ ನಿರ್ಲಕ್ಷ್ಯ ತೋರುತ್ತಿರುವ ಕಾಂಗ್ರೆಸ್ ಸರ್ಕಾರ ಬಡವರ ತೆರಿಗೆ ಹಣವನ್ನು ಲೂಟಿ ಮಾಡಿ, ಭ್ರಷ್ಟಾಚಾರದಲ್ಲಿ ಮುಳುಗಿದ್ದು, ಈ ಸರ್ಕಾರಕ್ಕೆ ಜನಸಾಮಾನ್ಯರ ಕೂಗು ಅರ್ಥವಾಗದು. ಸ್ಥಳೀಯ ಶಾಸಕರು ಯಾವುದೇ ಅಭಿವೃದ್ಧಿ ಕಾರ್ಯ ಮಾಡದೆ ರಾಜ್ಯದ ಸಚಿವ ಸಂಪುಟ ಸಭೆಯ ಪತ್ರಿಕಾಗೋಷ್ಠಿಗೆ ಮಾತ್ರ ಸಿಮಿತವಾಗಿ ಮತ ಹಾಕಿ ಗೆಲ್ಲಿಸಿದ ಗದಗ ಜನತೆಯನ್ನೇ ನಿರ್ಲಕ್ಷ್ಯ ಮಾಡುತ್ತಿದ್ದಾರೆ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಆರೋಪಿಸಿದರು.

ನಗರದ ರಸ್ತೆ ಗುಂಡಿಗಳನ್ನು ಮುಚ್ಚದೆ ನಿರ್ಲಕ್ಷ್ಯ ತೋರಿ ಭ್ರಷ್ಟಾಚಾರದಲ್ಲಿ ಮುಳಗಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಗದಗ ಬಿಜೆಪಿ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಅವರು ಮಾತನಾಡಿದರು.




ರಾಜ್ಯ ಪ್ರಧಾನ ಕಾರ್ಯದರ್ಶಿ, ಮಾಜಿ ಶಾಸಕ ಪಿ. ರಾಜೀವ್ ಮಾತನಾಡಿ, ಗದಗ ನಗರದ ಯಾವುದೇ ರಸ್ತೆಗಳ ಗುಂಡಿಗಳನ್ನು ಮುಚ್ಚಿಲ್ಲ, ನಗರದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳಾಗಿಲ್ಲ. ಜನರ ತೆರಿಗೆ ಹಣವನ್ನು ಲೂಟಿ ಮಾಡಲೆಂದೇ ಕಾಂಗ್ರೆಸ್ ಅಧಿಕಾರ ವಹಿಸಿಕೊಂಡಂತಿದೆ ಎಂದರು.

ನಿಗಮ ಮಂಡಳಿ ಮಾಜಿ ಜಿಲ್ಲಾಧ್ಯಕ್ಷ ಎಂ.ಎಸ್. ಕರಿಗೌಡ್ರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಫಕ್ಕೀರೇಶ ರಟ್ಟಿಹಳ್ಳಿ, ಪ್ರಮುಖರಾದ ಎಂ.ಎಂ. ಹಿರೇಮಠ, ಜಗನ್ನಾಥಸಾ ಭಾಂಡಗೆ, ಸಿದ್ದು ಪಲ್ಲೇದ, ಸುರೇಶ ಮರಳಪ್ಪನವರ, ರಾಘವೇಂದ್ರ ಯಳವತ್ತಿ, ಅನಿಲ ಅಬ್ಬಿಗೇರಿ, ಅಶೋಕ ಸಂಕಣ್ಣವರ, ರವಿ ದಂಡಿನ, ಸುಧಿರ ಕಾಟಿಗರ, ಅಶೋಕ ಕುಡತಿನಿ, ಶಂಕರ ಕಾಕಿ, ಸುರೇಶ ಚಿತ್ತರಗಿ, ರಮೇಶ ಸಜ್ಜಗಾರ, ಸಂತೋಷ ಅಕ್ಕಿ, ನಿರ್ಮಲಾ ಕೊಳ್ಳಿ, ನವೀನ ಕೊಟೆಕಲ್, ವಿಜಯಲಕ್ಷ್ಮೀ ಮಾನ್ವಿ, ಶಿವು ಹಿರೇಮನಿಪಾಟೀಲ, ಮಹಾಂತೇಶ ನಲವಡಿ, ವಿನಾಯಕ ಮಾನ್ವಿ, ಗಂಗಾಧರ ಮೇಲಗಿರಿ, ರಾಚಯ್ಯ ಹೊಸಮಠ, ದೇವೆಂದ್ರಪ್ಪ ಹೂಗಾರ, ವಂದನಾ ವರ್ಣೇಕರ, ಪಾರ್ವತಿ ಪಟ್ಟಣಶೆಟ್ಟಿ, ಜಯಶ್ರೀ ಅಣ್ಣಿಗೇರಿ, ಅವಿನಾಶ ಹೊನಗುಡಿ, ಕಮಲಾಕ್ಷಿ ಗೊಂದಿ, ಸ್ವಾತಿ ಅಕ್ಕಿ, ರೇಖಾ ಬಂಗಾರಶೆಟ್ಟರ, ಕವಿತಾ ಬಂಗಾರಿ, ಪ್ರೀತಿ ಶಿವಪ್ಪನಮಠ, ರೇಖಾ ಗೌಳಿ, ಶೆಖವ್ವ ಮಾಸರೆಡ್ಡಿ, ವಸಂತ ಹಬೀಬ, ಪ್ರವೀಣ ಹಡಪದ, ಚಂದ್ರು ಒಂಟೆತ್ತಿನವರ, ಗೋಪಾಲ ಗಡ್ಡದವರ, ವಿನೋದ ಹಂಸನೂರ ಮುಂತಾದವರು ಪಾಲ್ಗೊಂಡಿದ್ದರು.

# ಪೂರ್ವ ಸಿದ್ಧತೆಯಿಲ್ಲದ ಗಣತಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜಾತಿ ಗಣತಿ ನಡೆಸಲು ಮುಂದಾಗಿರುವ ರಾಜ್ಯ ಸರಕಾರ ಜಾತಿಗಳನ್ನು ಒಡೆಯುವ ಉದ್ದೇಶದಿಂದ ಪೂರ್ವಸಿದ್ಧತೆಯಿಲ್ಲದ ಗಣತಿಗೆ ತರಾತುರಿಯಲ್ಲಿ ಕೈ ಹಾಕಿದೆ ಎಂದು ಚನ್ನು ಪಾಟೀಲ ಫೌಂಡೇಷನ್‌ನ ಸಂಸ್ಥಾಪಕ ಉಮೇಶ ಪಾಟೀಲ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಪೂರ್ವಸಿದ್ಧತೆಯಿಲ್ಲದೆ ನಡೆಸಿರುವ ಈ ಗಣತಿ ದುಂದು ವೆಚ್ಚಕ್ಕೆ ಕಾರಣವಾಗಿದೆ. ಅಧಿಕಾರವಿಲ್ಲದಿದ್ದರೂ ರಾಜ್ಯ ಸರಕಾರ ಜಾತಿ ಗಣತಿ ಮಾಡಲು ಮುಂದಾಗಿರುವುದು ನಾಚಿಕೆಗೇಡಿನ ಸಂಗತಿ. ರಾಜ್ಯಾದ್ಯಂತ ಸರ್ವರ್ ಸಮಸ್ಯೆ, ಜಾತಿ ಗಣತಿ ಅರ್ಜಿ ಡೌನ್‌ಲೋಡ್ ಆಗದಿರುವುದು, ಯುಎಚ್‌ಐಡಿ ನಂಬರ್‌ಗಳಲ್ಲಿ ಸಮಸ್ಯೆ ತಲೆದೋರಿರುವುದು, ಮನೆಗಳ ಲೊಕೇಷನ್ ತಪ್ಪಾಗಿ ತೋರಿಸುತ್ತಿರುವುದು ಇಂತಹ ನೂರಾರು ಸಮಸ್ಯೆಗಳನ್ನು ಇಟ್ಟುಕೊಂಡು ಗಣತಿದಾರರು ಹೈರಾಣಾಗಿದ್ದಾರೆ. ರಾಜ್ಯಾದ್ಯಂತ ದಿನಕ್ಕೆ 10 ಲಕ್ಷ ಮನೆಗಳನ್ನು ಗಣತಿ ಮಾಡಬೇಕೆಂದು ಗುರಿ ಇಟ್ಟುಕೊಂಡಿರುವ ಸರಕಾರಕ್ಕೆ ಈ ಎಲ್ಲ ತೊಂದರೆಗಳಿಂದ ಸರಿಯಾಗಿ ಒಂದು ಲಕ್ಷ ಮನೆಗಳನ್ನೂ ಗಣತಿ ಮಾಡಲು ಸಾಧ್ಯವಾಗುತ್ತಿಲ್ಲ. ಇದೆಲ್ಲವನ್ನೂ ನೋಡಿದರೆ ಸರಕಾರದ ಆಡಳಿತ ಯಂತ್ರ ಕುಸಿದು ಬಿದ್ದಿರುವುದು ಸ್ಪಷ್ಟವಾಗುತ್ತದೆ ಎಂದು ಉಮೇಶ ಪಾಟೀಲ ತಿಳಿಸಿದ್ದಾರೆ.

### ಜಿಲ್ಲಾ ಸಹಕಾರ ಯೂನಿಯನ್ ಬ್ಯಾಂಕ್‌ನಿಂದ 'ಏಕ್ ದಿನ್ ಏಕ್ ಘಂಟಾ ಏಕ್ ಸಾಥ್' ಶ್ರಮದಾನ ಕಾರ್ಯಕ್ರಮ

# ಸಹಕಾರ ಸಂಸ್ಥೆಗಳು ಉತ್ತಮ ಜಗತ್ತನ್ನು ನಿರ್ಮಿಸಬಲ್ಲವು

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರವು 2025ನೇ ವರ್ಷವನ್ನು ಅಂತಾರಾಷ್ಟ್ರೀಯ ಸಹಕಾರ ವರ್ಷ ಎಂದು ಘೋಷಿಸಿದ್ದು, ಅದರ ಧ್ಯೇಯ ಸಹಕಾರ ಸಂಸ್ಥೆಗಳು ಉತ್ತಮ ಜಗತ್ತನ್ನು ನಿರ್ಮಿಸಬಲ್ಲವು ಎಂದಾಗಿದೆ. ಇಂದು ಆಯೋಜಿಸಿರುವ 'ಏಕ್‌ದಿನ್ ಏಕ್ ಘಂಟಾ ಏಕ್ ಸಾಥ್' ಶ್ರಮದಾನ ಕಾರ್ಯಕ್ರಮದಲ್ಲಿ ತಾವೆಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದು ಸಂತಸ ತಂದಿದೆ ಎಂದು ಕರ್ನಾಟಕ ರಾಜ್ಯ ಸಹಕಾರ ಹಾಲು ಉತ್ಪಾದಕರ ಮಹಾಮಂಡಳದ ನಿರ್ದೇಶಕ ಎಚ್.ಜಿ. ಹಿರೇಗೌಡ್ರ ಹೇಳಿದರು.

ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್, ಕೆ.ಸಿ.ಸಿ. ಬ್ಯಾಂಕ್ ಧಾರವಾಡ, ಕೆ.ಎಂ.ಎಫ್ ಧಾರವಾಡ ಹಾಗೂ ಗದಗ ಜಿಲ್ಲೆಯ ಎಲ್ಲಾ ಸಹಕಾರ ಸಂಘ/ಬ್ಯಾಂಕುಗಳ ಸಂಯುಕ್ತ ಆಶ್ರಯದಲ್ಲಿ ಅಂತಾರಾಷ್ಟ್ರೀಯ ಸಹಕಾರ ವರ್ಷಾಚರಣೆ-2025ರ ಅಂಗವಾಗಿ ಗುರುವಾರ ಹಮ್ಮಿಕೊಂಡಿದ್ದ 'ಏಕ್ ದಿನ್ ಏಕ್ ಘಂಟಾ ಏಕ್ ಸಾಥ್' ಶ್ರಮದಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಸಹಕಾರ ಸಂಘಗಳ ಉಪನಿಬಂಧಕಿ ಎಸ್.ಎಸ್. ಕಬಾಡೆ ಮಾತನಾಡಿ, ಸಹಕಾರದಿಂದ ಸ್ವಚ್ಛತಾ ಅಭಿಯಾನ ಜೂನ್ ತಿಂಗಳಿನಲ್ಲಿ ಪ್ರಾರಂಭಗೊಂಡು 'ಏಕ್ ಪೇಡ್ ಮಾ ಕಿ ನಾಮ್‌ಸೇ' ಹೆಸರಿನಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನೂ ಜರುಗಿಸಲಾಗಿದೆ. ಅಂತೆಯೇ ಜಿಲ್ಲೆಯಲ್ಲಿನ ಎಲ್ಲಾ ಸಹಕಾರ ಸಂಘ/ಬ್ಯಾಂಕುಗಳ ಆವರಣಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕೆಂದು ಹೇಳಿದರು.

ಗದಗ ಜಿಲ್ಲಾ ಸಹಕಾರ ಯೂನಿಯನ್ನಿನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ಮಹಿಳಾ ಸಹಕಾರ ಶಿಕ್ಷಕಿ ರಶೀದಾಬಾನು ಸಿ.ಯಲಿಗಾರ ವಂದಿಸಿದರು.

ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ನಿರ್ದೇಶಕ ಎಸ್.ಕೆ. ಕುರಡಗಿ, ಸಹಕಾರ ಸಂಘಗಳ ಸಹಾಯಕ ನಿಬಂಧಕಿ ಪುಷ್ಪಾ ಕಡಿವಾಳ, ಗದಗ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಶಾಂತಾ ಎಚ್.ಎಂ, ಕೆ.ಸಿ.ಸಿ ಬ್ಯಾಂಕ್‌ನ ಪ್ರಭಾರ ಜಿಲ್ಲಾ ನಿಯಂತ್ರಣಾಧಿಕಾರಿ ಎಸ್.ವ್ಹಿ. ಚಳಗೇರಿ, ಮರ್ಚಂಟ್ಸ್ ಲಿಬರಲ್ ಕೋ-ಆಪ್ ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕ ರಾಜು ಕೋಟಿ, ಮರ್ಚಂಟ್ಸ್ ಅರ್ಬನ್ ಕೋ-ಆಪ್ ಬ್ಯಾಂಕ್‌ನ ಗದಗ ವ್ಯವಸ್ಥಾಪಕ ನಿರ್ದೇಶಕ ಬಸವರಾಜ ನಾಯಕವಾಡಿ ಹಾಗೂ ಬ್ಯಾಂಕಿನ ಸಿಬ್ಬಂದಿಗಳು, ಸಹಕಾರ ಇಲಾಖೆಯ ಎಲ್ಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಗದಗ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ ಮಾತನಾಡಿ, ದೇಶ, ರಾಜ್ಯ, ಜಿಲ್ಲೆ, ತಾಲೂಕು ಹಾಗೂ ನಮ್ಮ ಹಳ್ಳಿಗಳಿಂದ ಸ್ವಚ್ಛತೆ ಪ್ರಾರಂಭವಾಗಿದೆ. ನಮ್ಮ ಮನೆಯನ್ನು ಹೇಗೆ ನಾವು ಸ್ವಚ್ಛವಾಗಿ ಇಟ್ಟುಕೊಳ್ಳುತ್ತೇವೆಯೋ ಹಾಗೇ ನಮ್ಮ ಸಮಾಜ ಹಾಗೂ ಗ್ರಾಮವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

# ಸ್ವತಂತ್ರ ಅಭ್ಯರ್ಥಿಗಳಿಂದ ಪ್ರಚಾರ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅಂಜುಮನ್-ಏ-ಇಸ್ಲಾಂ ಕಮಿಟಿ ಆಡಳಿತ ಮಂಡಳಿ ಚುನಾವಣೆಗೆ ಸ್ಪರ್ಧಿಸಿದ ಸ್ವತಂತ್ರ ಅಭ್ಯರ್ಥಿಗಳಾದ ದಾವಲ ಇರಕಲ ಐ.ಬಿ, ಇಮಾಮ ಮರಬದ, ಜಹಾಂಗೀರ ಮುಳಗುಂದ ಹಾಗೂ ಇನ್ನಿತರ ಅಭ್ಯರ್ಥಿಗಳು ಕಮಿಟಿಯ ಸಾಮಾನ್ಯ ಸದಸ್ಯರಲ್ಲಿ ಮತಯಾಚನೆ ಮಾಡಿದರು.

ಗದಗ ನಗರದ ವ್ಯಾಪ್ತಿಯ ಗದಗ-ಬೆಟಗೇರಿ ಅಂಜುಮನ್-ಏ-ಇಸ್ಲಾಂ ಕಮಿಟಿ ಸಾಮಾನ್ಯ ಸದಸ್ಯರು ಹಾಗೂ ಹಿರಿಯರು ಹಿತೈಷಿಗಳು ಪ್ರಚಾರ ಕಾರ್ಯದಲ್ಲಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಇರ್ಫಾನ್ ಡಂಬಳ, ಅನ್ವರ್ ಶಿರಹಟ್ಟಿ, ಇರ್ಷಾದ್ ಮಾನ್ವಿ, ಶಾರುಖ್ ಹುಯಿಲಗೋಳ, ಶಾಬಾಜ ಮುಲ್ಲಾ, ಸಲೀಂ ನರಗುಂದ, ಮುಜಮಿಲ ಬಳ್ಳಾರಿ, ಜಾವಿದ್ ಬಬರ್ಚಿ, ಶಫಿ ಡಂಬಳ, ಮುದಸ್ಸರ ಬಳ್ಳಾರಿ, ಖಲೀಲ್ ಬಳ್ಳಾರಿ, ಅಕ್ತರರಜಾ ಡಂಬಳ, ಪಾಪು ಬಬರ್ಚಿ, ಮುಸ್ತಕಿಮ ಶಿರಹಟ್ಟಿ, ಫಾರೂಕ್ ಬಬರ್ಚಿ, ದಾದಾಪೀರ ಕನವಳ್ಳಿ, ಅಪ್ಪಿ ತಾಡಪತ್ರಿ, ರಿಯಾಜ್ ಬಬರ್ಚಿ ಉಪಸ್ಥಿತರಿದ್ದರು.

### ಅಡವಿಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ, ಶ್ರೀದೇವಿ ಪುರಾಣ ಪ್ರವಚನ

# ಶಕ್ತಿದೇವಿಯ ಆರಾಧನೆಯಿಂದ ಜೀವನ ಪಾವನ

■ವಿಜಯಸಾಕ್ಷಿ ಸುದ್ದಿ, ಗದಗ

ನವರಾತ್ರಿ ಆಚರಣೆಯು ಶರನ್ನವರಾತ್ರಿ, ದುರ್ಗಾ ಪೂಜೆ, ಮತ್ತು ವಿಜಯದಶಮಿಯನ್ನು ಒಳಗೊಂಡಿದ್ದು, ಒಂಬತ್ತು ರಾತ್ರಿಗಳು, ಒಂಬತ್ತು ದೇವಿಯರ ಪೂಜೆಯನ್ನು ಮಾಡಲಾಗುತ್ತದೆ. ಇದನ್ನು ಕೆಟ್ಟದ್ದರ ಮೇಲೆ ಒಳ್ಳೆಯದರ ವಿಜಯವನ್ನು ಸಂಕೇತಿಸಲು ಆಚರಿಸಲಾಗುತ್ತದೆ. ಭಾರತೀಯ ಸಂಸ್ಕೃತಿ, ಪರಂಪರೆಯನ್ನು ರೂಢಿಸಿಕೊಂಡು ಬಂದಿರುವ ನಾವು, ಶ್ರದ್ಧಾ ಭಕ್ತಿಯಿಂದ ದಸರಾ ಹಬ್ಬವನ್ನು ಆಚರಿಸುವ ಜೊತೆಗೆ ಶಕ್ತಿದೇವಿಯ ಆರಾಧನೆ ಮಾಡಿ ನಮ್ಮ ಜೀವನವನ್ನು ಪಾವನ ಮಾಡಿಕೊಳ್ಳಬೇಕು ಎಂದು ಬಳಗಾನೂರ ಚಿಕೇನಕೊಪ್ಪ ಚನ್ನವೀರ ಶರಣರ ಮಠದ ಶ್ರೀಶಿವಶಾಂತವೀರ ಶರಣರು ಹೇಳಿದರು.

ನಗರದ ಮುಳಗುಂದನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ ಮತ್ತು ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.




ಸಮ್ಮುಖ ವಹಿಸಿದ್ದ ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ನವರಾತ್ರಿ ಆಚರಣೆಯ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಗಣ್ಯ ಉದ್ದಿಮೆದಾರರಾದ ಬಸವರಾಜ ಬಂಗಾರಶೆಟ್ಟರ, ಸುಜಾತಾ ಬಂಗಾರಶೆಟ್ಟರ, ಬಾಬಾಸಾ ಭಾಂಡಗೆ, ಅಶ್ವಿನಿಬಾಯಿ ಭಾಂಡಗೆ, ಅಂಬಾಸಾ ಖಟವಟೆ, ಗಾಯತ್ರಿ ಖಟವಟೆ, ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷ ಎಸ್.ಪಿ. ಸಂಶಿಮಠ, ಅಧ್ಯಕ್ಷರಾದ ಸದಾಶಿವಯ್ಯ ಮದರಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ ಮುಂತಾದ ಗಣ್ಯರು ವೇದಿಕೆಯಲ್ಲಿದ್ದರು.

ಶ್ರೀಅನ್ನಪೂರ್ಣೇಶ್ವರ ಸನ್ನಿಧಿಯಲ್ಲಿ ಡಾ.ರಾಜಗುರು ಗುರುಸ್ವಾಮಿ ಕಲಕೇರಿ ಅವರಿಂದ ಪುರಾಣ ಪ್ರವಚನ ನಡೆಯಿತು. ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಿಸಿದರು. ಪಕ್ರುಸಾಬ ಮುಲ್ಲಾ, ಜಗನ್ನಾಥ ಕಲಬುರಗಿ, ಶರಣಕುಮಾರ ಗುತ್ತರಗಿ, ಎಸ್.ಬಿ. ಭಜಂತ್ರಿ ಸಂಗೀತ ಸೇವೆ ನೀಡಿದರು. ಪೂಜಾ ಸಮಿತಿ ಅಧ್ಯಕ್ಷ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಜಾತ್ರಾ ಮಹೋತ್ಸವ ಸಮಿತಿ ಕಾರ್ಯದರ್ಶಿ ಗೀತಾ ಎಂ.ಹೂಗಾರ, ಸಹಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಕೋಶಾಧ್ಯಕ್ಷ ವಿರುಪಣ್ಣ ಬಳ್ಳೊಳ್ಳಿ ಸ್ವಾಗತಿಸಿದರು. ವಿ.ಎಂ. ಕುಂದ್ರಾಳಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ಜಾತ್ರಾ ಮಹೋತ್ಸವ ಮಹಿಳಾ ಸಮಿತಿ ಕೋಶಾಧ್ಯಕ್ಷರಾದ ಅಶ್ವಿನಿ ಎಸ್.ನೀಲಗುಂದ ವಂದಿಸಿದರು.

ಒಂಬತ್ತು ದಿನಗಳ ನವರಾತ್ರಿ ನಂತರ, ದಶಮಿಯಂದು ರಾವಣನ ಪ್ರತಿಕೃತಿಗಳನ್ನು ಸುಡುವ ಮೂಲಕ ಕೆಟ್ಟದ್ದರ ಮೇಲೆ ಒಳ್ಳೆಯದರ ವಿಜಯವನ್ನು ಸಂಭ್ರಮಿಸಲಾಗುತ್ತದೆ. ರೈತರು ಮತ್ತು ವ್ಯಾಪಾರಿಗಳು ತಮ್ಮ ಆಯುಧಗಳನ್ನು ಪೂಜಿಸುವ ಆಯುಧ ಪೂಜೆಯನ್ನು ಆಚರಿಸುತ್ತಾರೆ. ದುರ್ಗಾದೇವಿ ಮಹಿಷಾಸುರ ರಾಕ್ಷಸನನ್ನು ಸಂಹರಿಸಿ, ಲೋಕಕ್ಕೆ ಒಳಿತನ್ನು ತಂದ ಕಥೆಯನ್ನು ನವರಾತ್ರಿ ತಿಳಿಸುತ್ತದೆ. ವಿಜಯದಶಮಿಯ ದಿನದಂದು ಶ್ರೀರಾಮನು ರಾವಣನ ಮೇಲೆ ವಿಜಯ ಸಾಧಿಸಿದ. ಈ ಹಬ್ಬವು ಕೆಟ್ಟತನದ ಮೇಲೆ ಒಳಿತಿನ ವಿಜಯವನ್ನು ಸಂಕೇತಿಸುತ್ತದೆ ಎಂದು ಶಿವಶಾಂತವೀರ ಶರಣರು ಹೇಳಿದರು.

### ಬೆಟಗೇರಿ ಕಾಳಿಕಾ ದೇವಸ್ಥಾನದ ಶರನ್ನವರಾತ್ರಿ ಉತ್ಸವ ಕಾರ್ಯಕ್ರಮದಲ್ಲಿ ಸಾಧಕರಿಗೆ ಸನ್ಮಾನ

# ವಿಶ್ವಕರ್ಮ ಸಮಾಜದ ಕೊಡುಗೆ ಅಪಾರ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ವಿಶ್ವಕರ್ಮ ಸಮಾಜ ನಮ್ಮ ಸಂಸ್ಕೃತಿ, ಧಾರ್ಮಿಕ ಪರಂಪರೆಗೆ ಬಹು ದೊಡ್ಡ ಕೊಡುಗೆ ನೀಡಿದ್ದಾರೆ. ಕರಕುಶಲ ಪಂಚ ವೃತ್ತಿಗಳನ್ನೆ ತಮ್ಮ ಬದುಕಿನ ಭಾಗ ಮಾಡಿಕೊಂಡು ಜೀವನ ಸಾಗಿಸುತ್ತಿದ್ದಾರೆ. ಸಮಾಜದ ವಿವಿಧ ಕೇತ್ರದಲ್ಲಿ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ಸನ್ಮಾನಿಸುತ್ತಿರುವದು ನಿಜಕ್ಕೂ ಆರೋಗ್ಯಕರ ವಿಚಾರ ಎಂದು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಅಭಿಪ್ರಾಯಪಟ್ಟರು.

ಬೆಟಗೇರಿ ಪಟ್ಟಣದ ಹೊಸಪೇಟ ಚೌಕ ಓಣಿಯ ಶ್ರೀ ಕಾಳಿಕಾ ದೇವಸ್ಥಾನದಲ್ಲಿ ವಿಶ್ವಕರ್ಮ ಸಮಾಜದ ಶ್ರೀ ಕಾಳಿಕಾ ದೇವಿ ದೇವಸ್ಥಾನ ಟ್ರಸ್ಟ ಕಮಿಟಿಯು ಹಮ್ಮಿಕೊಂಡಿರುವ ಶರನ್ನವರಾತ್ರಿ ಉತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಸಮಾಜದ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ರಾಜ್ಯ ಸರಕಾರಿ ನೌಕರರ ಸಂಘದ ಗದಗ ಜಿಲ್ಲಾ ಶಾಖೆಯ ನಿಕಟ ಪೂರ್ವ ಅಧ್ಯಕ್ಷರು ಮತ್ತು ಮೇರಿ ದೇವಾಸಿಯಾ ಗೃಹ ನಿರ್ಮಾಣ ಸಹಕಾರಿ ಸಂಘ ಗದಗ ಅಧ್ಯಕ್ಷ ಡಾ. ರವಿ ಗುಂಜೀಕರ ಮಾತನಾಡಿ, ವಿಶ್ವಕರ್ಮ ಸಮಾಜವು ತಮ್ಮ ಕೆಲಸಗಳ ಮೂಲಕ ದೇಶಕ್ಕೆ ಮಹಾನ್ ಕೊಡುಗೆ ನೀಡಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶ್ರೀಧರ ಕೊಣ್ಣೂರ ಮಾತನಾಡಿ, ಅನೇಕ ಜೀರ್ಣೋದ್ಧಾರ ಉಪಕ್ರಮಗಳ ಮೂಲಕ ದೇವಸ್ಥಾನದ ಅಭಿವೃದ್ಧಿಯ ಉದ್ದೇಶದಿಂದ ಕೆಲಸ ಮಾಡುತ್ತಿದ್ದೇವೆ. ಸಮಾಜ ಬಾಂಧವರು ತ್ರಿಕರಣಪೂರ್ವಕ ಸೇವೆಯ ಮೂಲಕ ಸಹಕಾರ ನೀಡಬೇಕೆಂದು ಮನವಿ ಮಾಡಿಕೊಂಡರು.

ಹಿರಿಯರಾದ ಕುಸುಮಾಬಾಯಿ ಲಿಂಗಚಾರ್ಯ ಅಕ್ಕಸಾಲಿ, ಸೋನಾಬಾಯಿ ಕಾಶಪ್ಪ ಬಡಿಗೇರ, ರಾಮಚಂದ್ರ(ಬಾಬುರಾವ್) ವಿಶ್ವನಾಥ ನರಗುಂದ, ಅಚ್ಯುತ ವಿರೂಪಾಕ್ಷಪ್ಪ ಬೆಂತೂರ, ಮೌನೇಶ ಭಗವಂತಪ್ಪ ಲಕ್ಕುಂಡಿ, ದ್ಯಾಮಣ್ಣ ಶಿಲ್ಪಚಾರ್ಯ ಬಡಿಗೇರ, ಕಾಳಪ್ಪಚಾರ್ಯ, ಶ್ರೀಕಾಂತ ಮೌನೇಶ ಬಡಿಗೇರ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಡಾ. ಬಸವರಾಜ ಬಳ್ಳಾರಿ, ಗದಗ ಕೆವಿಎಸ್‌ಆರ್ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಪುಷ್ಪಾವತಿ ದಂಪತಿಗಳನ್ನು, ಡಾ. ರವಿ ಗುಂಜೀಕರ, ಮಹೇಶ ಕಮ್ಮಾರ, ದೇವೇಂದ್ರಪ್ಪ ಬಡಿಗೇರ ಇವರನ್ನು ಸನ್ಮಾನಿಸಲಾಯಿತು.

ಸಾಕ್ಷೀ ವಿನಾಯಕ ಹುಯಿಲಗೋಳ ಪ್ರಾರ್ಥಿಸಿದರು. ಮಂಜುನಾಥ ಅಕ್ಕಸಾಲಿ ಸ್ವಾಗತಿಸಿದರು. ವಿಶ್ವನಾಥ ಕಮ್ಮಾರ ನಿರೂಪಿಸಿದರು. ಅಶೋಕ ಸುತಾರ ವಂದಿಸಿದರು.

ಗದಗ ಜಿಲ್ಲಾ ವಿಶ್ವಕರ್ಮ ಯುವ ಪರಿಷತ್ ಅಧ್ಯಕ್ಷ ಮಹೇಶ ಕಮ್ಮಾರ ಮತ್ತು ಗದಗ ಜಿಲ್ಲಾ ವಿಶ್ವಕರ್ಮ ಮಹಾಸಭಾದ ಅಧ್ಯಕ್ಷ ದೇವೇಂದ್ರಪ್ಪ ಬಡಿಗೇರ ಮಾತನಾಡಿ, ಬೆಟಗೇರಿ ಶ್ರೀ ಕಾಳಿಕಾ ದೇವಿ ದೇವಸ್ಥಾನ ಕಮಿಟಿ ಉತ್ತಮ ಕಾರ್ಯಕ್ರಮದ ಮೂಲಕ ಜಿಲ್ಲೆಯಲ್ಲಿ ಮಾದರಿ ಕೆಲಸ ಮಾಡುತ್ತಿದೆ. ಸಮಾಜದ ಹಿರಿಯರನ್ನು ಗುರುತಿಸಿ ಗೌರವಿಸುವ ಮತ್ತು ಕುಟುಂಬ ಸಮೀಕ್ಷೆಯಲ್ಲಿ ಸಮಗ್ರ ಮಾಹಿತಿ ಸಂಗ್ರಹಿಸಿ ಕೈಪಿಡಿಯನ್ನು ಹೊರತಂದಿರುವದು ವಿಶೇಷವಾಗಿದೆ ಎಂದರು.

# ಗುಣಮಟ್ಟದ ಆಹಾರದಿಂದ ಉತ್ತಮ ಆರೋಗ್ಯ

■ವಿಜಯಸಾಕ್ಷಿ ಸುದ್ದಿ, , ನರಗುಂದ

ನರಗುಂದ ಶಿಶು ಅಭಿವೃದ್ಧಿ ಯೋಜನೆಯ ವತಿಯಿಂದ ಚಿಕ್ಕನರಗುಂದ ಗ್ರಾಮದ ಅಂಗನವಾಡಿ ಕೇಂದ್ರ ಸಂಖ್ಯೆ-106ರಲ್ಲಿ ಪೋಷಣ್ ಮಾಸಾಚರಣೆ ಪ್ರಯುಕ್ತ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಶಾಸಕ ಸಿ.ಸಿ. ಪಾಟೀಲ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ತಾಯಿಯ ಹೆಸರಲ್ಲಿ ಗಿಡ ನೆಡಲಾಯಿತು. ಪೋಷಣ್ ಅಭಿಯಾನದಡಿ ಸಕ್ಷಮ್ ಅಂಗನವಾಡಿಗಳಿಗೆ ನೀಡಲಾದ ಟಿವಿ ಉದ್ಘಾಟನೆ ನೆರವೇರಿಸಲಾಯಿತು ಮತ್ತು ಪೌಷ್ಠಿಕ ಆಹಾರ ಶಿಬಿರ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಕೇಂದ್ರ ಪುರಸ್ಕೃತ ಯೋಜನೆಯಾದ ಪೋಷಣ್ ಅಭಿಯಾನದಡಿ ಪ್ರತಿ ವರ್ಷ ಇಲಾಖೆಯಿಂದ ವಿವಿಧ ಕಾರ್ಯಕ್ರಮಗಳು ಜರುಗುತ್ತಿವೆ. ಉತ್ತಮ ಆರೋಗ್ಯ ಹೊಂದಬೇಕಾದರೆ ಗುಣಮಟ್ಟದ ಪೌಷ್ಠಿಕತೆಯುಳ್ಳ ಸಮತೋಲನ ಆಹಾರದಿಂದ ಮಾತ್ರ ಸಾಧ್ಯ. ಕೇಂದ್ರ ಸರ್ಕಾರದಿಂದ ತಾಲೂಕಿನ 62 ಕೇಂದ್ರಗಳಿಗೆ ಟಿವಿ ವಿತರಿಸಲಾಗಿದ್ದು, ಅದನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ತಿಳಿಸಿದರು.



ಕಾರ್ಯಕ್ರಮದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಮಲಾ ಹುಲಕೋಟಿ, ಗ್ರಾ.ಪಂ ಅಧ್ಯಕ್ಷರಾದ ಮಲ್ಲವ್ವ ಮರೆಯಣ್ಣವರ, ಮಾಜಿ ಅಧ್ಯಕ್ಷ ಮುತ್ತುರೆಡ್ಡಿ ರಾಯರೆಡ್ಡಿ, ಜಡಿಯಪ್ಪಗೌಡ ಚೆನ್ನಪ್ಪಗೌಡ್ರ, ಶೃತಿ ಬ್ಯಾಳಿ, ಈರಮ್ಮ ಮುದಿಗೌಡ್ರ, ಶಂಕ್ರಮ್ಮ ಚಲವಾದಿ, ಶರಣಪ್ಪ ಹಳೇಮನಿ, ಅಶೋಕ ಜಾನೋಪಂತ, ಮೇಲ್ವಿಚಾರಕಿ ಭಾರತಿ ಕಾಲಚೆಟ್ಟಿ, ಪಂಚಾಯತ ಅಭಿವೃದ್ಧಿ ಅಧಿಕಾರಿ ಮಂಜುನಾಥ ಗಣಿ, ಗರ್ಭಿಣಿ ಮಹಿಳೆಯರು, ಮಕ್ಕಳು, ಅಂಗನವಾಡಿ ಕಾರ್ಯಕರ್ತೆಯರು ಹಾಜರಿದ್ದರು. ಮಂಜುನಾಥ ಗುಗ್ಗರಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.



ಭಾರತೀಯ ಜನತಾ ಪಾರ್ಟಿ ಗದಗ ಗ್ರಾಮೀಣ ಮಂಡಲದ ವತಿಯಿಂದ ಹರ್ತಿ ಗ್ರಾಮದಲ್ಲಿ ಶ್ರೀ ವಿಶ್ವಕರ್ಮ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಗದಗ ಗ್ರಾಮೀಣ ಮಂಡಲ ಅಧ್ಯಕ್ಷರಾದ ಬೂದಪ್ಪ ಹಳ್ಳಿ, ಪ್ರಧಾನ ಕಾರ್ಯದರ್ಶಿ ಸುಭಾಸ ಸುಂಕದ, ಮಂಜುನಾಥ ಹಳ್ಳೂರಮಠ, ಸಿದ್ದಪ್ಪ ಜೊಂಡಿ, ಸೋಮರೆಡ್ಡಿ ನಡೂರ, ಭಗನ ರಾಜಪುರೋಹಿತ, ರಾಚಪ್ಪ ಅಸುಂಡಿ, ಮಹೇಶ ಕಮ್ಮಾರ, ರಾಜು ಕುಲಕರ್ಣಿ, ಬಸವರಾಜ ಹರ್ಲಾಪೂರ, ಸುನೀಲ ಕುರ್ತಕೋಟಿ, ಮಂಜುನಾಥ ಹವಳಣ್ಣವರ ಮುಂತಾದವರು ಉಪಸ್ಥಿತರಿದ್ದರು.



ಡಂಬಳ ಹೋಬಳಿಯ ಪೇಠಾ ಆಲೂರ ಗ್ರಾಮದ ಶ್ರೀಹಾಲಶಿವಯೋಗೇಶ್ವರ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ವಿದ್ಯಾರ್ಥಿನಿಯರಾದ ನಾಗರತ್ನ ಚಿಗರಿ, ಆಫ್ರಿನ್ ಹಳ್ಳಿಗುಡಿ ರೋಪ್ ಸ್ಕಿಪ್ಪಿಂಗ್‌ನ್ಲ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿನಿಯರಿಗೆ ಮತ್ತು ತರಬೇತಿ ನೀಡಿದ ದೈಹಿಕ ಉಪನ್ಯಾಸಕ ಕಿರಣಕುಮಾರ ಎಸ್.ಮುಂಡರಗಿ ಅವರಿಗೆ ತ್ರಿವಿದ ದಾಸೋಹಿ ಹಾಲೇಶ್ವರ ಶ್ರೀಗಳು, ಪ್ರಾಚಾರ್ಯ ಎಸ್.ವಿ. ಬಿಳಗಿ, ಉಪನ್ಯಾಸಕರು, ಶಾಲಾ ಸಿಬ್ಬಂದಿ ವರ್ಗ, ಗ್ರಾಮದ ಹಿರಿಯರು ಅಭಿನಂದನೆ ಸಲ್ಲಿಸಿದ್ದಾರೆ.


## ಪುರಸಭೆ ಕಾರ್ಯಾಲಯ ಮುಂಡರಗಿ-582118

ಫ್ಯಾಕ್ಸ ನಂ: 08371-262638 Email Id: ka.mundargi.tmc@gmail.com
websit: www.mundargitown.gov.in

ಸಂಖ್ಯೆ: ಪುಸಮುಂ/SFC&15th Fin/2025-26 ದಿನಾಂಕ: 25-09-2025

### ಇ-ಟೆಂಡರ್ ಪ್ರಕಟಣೆ

ಕರ್ನಾಟಕ ಪಾರದರ್ಶಕ ಅಧಿನಿಯಮ 1999 & 2000 ಕೆ.ಪಿ.ಪಿ. ಪೋರ್ಟಲ್‌ದಲ್ಲಿ ಎಸ್.ಎಫ್.ಸಿ. ಕು.ನೀ.ಸ.ಪ. ಹಾಗೂ 15ನೇ ಹಣಕಾಸು ಅನುದಾನದಲ್ಲಿ ಕೆ.ಡಬ್ಲ್ಯೂ-1 ದಸ್ತಾವೇಜನಲ್ಲಿ ಕೆ.ಪಿ.ಪಿ. ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಟೆಂಡರನ್ನು ಆಹ್ವಾನಿಸಲಾಗಿದೆ. ಇಂಡೆಂಟ್ ನಂ. (1) DMA/2025-26/WS/ WORK_INDENT49005, (2) DMA/2025-26/WS/ WORK_ INDENT 49490 http://kppp.karnataka.gv.in ರಲ್ಲಿ ಸಂಪರ್ಕಿಸಿ ಟೆಂಡರ್ ಸಲ್ಲಿಸಬಹುದಾಗಿದೆ. ಬಿಡ್‌ದಾರರು ಟೆಂಡರ್ ವಿವರಗಳನ್ನು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ಪಡೆದು, ಸಂಬಂಧಿಸಿದ ಇಎಂಡಿ ಟೆಂಡರ್ ಫೀಗಳನ್ನು Electronic ಪದ್ಧತಿಯಲ್ಲಿ ತುಂಬಿ ಈ ಕೆಳಗೆ ನಿಗಧಿ ಪಡಿಸಿದ ದಿನಾಂಕಗಳಂದು ಟೆಂಡರ್ ಸಲ್ಲಿಸಬಹುದಾಗಿದೆ.

| | | |
|---|---|---|
| 1 | ಇ-ಪ್ರೊಕ್ಯೂರ್‌ಮೆಂಟ್ ಪದ್ಧತಿಯಲ್ಲಿ ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ: | 03/10/2025, ಸಾಯಂಕಾಲ 4:30ರ ವರೆಗೆ |
| 2 | ಟೆಂಡರ್ ತೆರೆಯುವ ದಿನಾಂಕ: | 04/10/2025 ಸಾಯಂಕಾಲ 5.30ರ ವರೆಗೆ |

ಸಹಿ/- (ಶ್ರೀ ಶಂಕರ.ಎಸ್. ಹುಲ್ಲಮ್ಮನವರ) ಮುಖ್ಯಾಧಿಕಾರಿ. ಪುರಸಭೆ ಮುಂಡರಗಿ

ಸಹಿ/- (ಶ್ರೀಮತಿ ನಿರ್ಮಲಾ. ನಾ. ಕೋರ್ಲಹಳ್ಳಿ) ಅಧ್ಯಕ್ಷರು ಪುರಸಭೆ ಮುಂಡರಗಿ

ವಾ.ಸಾ.ಇ/ಗದಗ/309/ದೇಶಪಾಂಡೆಪಬ್ಲಿಸಿಟಿ/2025-26

## ಅಂಜುಮನ್ ಸಂಸ್ಥೆಯ ಚುನಾವಣೆಯಲ್ಲಿ ಸಮಾಜ ಸೇವೆಯ ಕನಸು ಕಂಡವರ ಸ್ಪರ್ಧೆ

# ಭವಿಷ್ಯದ ಭರವಸೆಯ ಯುವ ನಾಯಕರು..!

### ದಾವಲಸಾಬ ಮಲ್ಲಸಮುದ್ರ (ಭಾಷಾಸಾಬ)




ದಕ್ಷನಾದವನಿಗೆ ಒಂದು ಸಮರ್ಥ, ನಿರ್ದಿಷ್ಟ, ಸ್ಪಷ್ಟ, ನಿಖರವಾದ ದೃಷ್ಟಿಕೋನ ಇರುತ್ತದೆ. ನಾಯಕನಾದವನ ಕಾರ್ಯಕ್ಷಮತೆಯೂ ದಕ್ಷತೆಯಿಂದ ಕೂಡಿರುತ್ತದೆ. ಸಾಮಾನ್ಯ ಮಿತಿಗಳನ್ನು ಮೀರಿದ ವ್ಯಕ್ತಿತ್ವ ಹೊಂದಿದವನು ಮಾತ್ರ ನಿಜವಾದ ಜನ ನಾಯಕನಾಗುತ್ತಾನೆ ಎಂಬ ನಿಲುವು ಯುವ ನಾಯಕ ಭಾಷಾಸಾಬ ಮಲ್ಲಸಮುದ್ರ ಅವರದು. ಜನರ ಸೇವೆ ಮಾಡಲು ಅಧಿಕಾರವೇ ಬೇಕಿಲ್ಲ. ಇಚ್ಛಾಶಕ್ತಿ, ಸಾಮಾಜಿಕ ಮನೋಭಾವ ಇದ್ದರೆ ಸಾಕು. ಜೊತೆಗೆ ಕುಟುಂಬದ ಹಿರಿಯರು ಹಾಕಿಕೊಟ್ಟ ಪರಂಪರೆ ಮುನ್ನಡೆಸಬೇಕೆಂಬ ಹಂಬಲವೊಂದಿದ್ದರೆ ಸಮಾಜದಲ್ಲಿ ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಬಹುದು. ಅಂತಹವರ ಸಾಲಿಗೆ ಸೇರುವ ಭವಿಷ್ಯದ ಭರವಸೆಯ ಯುವ ನಾಯಕರಾಗಿ ಕಾಣಿಸಿದ್ದಾರೆ.

ಭಾಷಾಸಾಬ ಮಲ್ಲಸಮುದ್ರರ ಹೆಸರೀಗ ಯುವ ಶಕ್ತಿಯೊಂದಿಗೆ ಎಲ್ಲೆಡೆ ಚಿರಪರಿಚಿತ. ಅಧಿಕಾರಕ್ಕಾಗಿ ಹಂಬಲಿಸಿದವರಲ್ಲ, ಸಮಾಜ ಸೇವೆ ಬಿಟ್ಟವರಲ್ಲ. ತಾವೇ ನಾಯಕರಾಗಿ ಬೆಳೆಯಬೇಕೆಂಬ ಹಂಬಲವೂ ಇಲ್ಲ. ಹಲವಾರು ಯುವ ನಾಯಕರಾದವರ ಹೆಗಲಿಗೆ ಹೆಗಲು ಕೊಟ್ಟು ಸಂಘಟನೆ ಮಾಡಿದವರು. ಇಂತಹ ಯುವ ನಾಯಕ ಯುವಕರ, ಸಮಾಜ ಸೇವಕರ, ಜನ ಸೇವಕರ ಕಣ್ಣಲ್ಲಿ ಭರವಸೆಯ ನಾಯಕರಾಗಿ ಹೊರ ಹೊಮ್ಮಿದ್ದಾರೆ.

ಸಾಮಾಜಿಕ ಸೇವೆಯೊಂದಿಗೆ ಸಾರ್ವತ್ರಿಕ ಬದುಕಿನಲ್ಲಿ ಕಾಣಿಸಿಕೊಂಡ ಹೃದಯವಂತಿಕೆಗೆ ಸಾಟಿ ಇಲ್ಲ. ನೊಂದವರ, ಬೆಂದವರ, ಬಡವರ, ನಿರ್ಗತಿಕರ, ನಿಸ್ಸಹಾಯಕರ ಸೇವೆಗೆ ಭಾಷಾಸಾಬ ಮಲ್ಲಸಮುದ್ರ ಎತ್ತಿದ ಕೈ.

ಜಯ ಕರ್ನಾಟಕ ಸಂಘಟನೆಯಲ್ಲಿ ಹಳ್ಳಿ, ಗ್ರಾಮಗಳಲ್ಲಿ ತಮ್ಮ ಸಂಘಟನಾತ್ಮಕ ಶಕ್ತಿಯೊಂದಿಗೆ ಎಲ್ಲರ ಮನ, ಮನೆ ಗೆದ್ದವರು. ಬೀದಿ ಬದಿ ಸಂಘಟನೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡವರು. ಸದಾ ಬೀದಿ ವ್ಯಾಪಾರಿಗಳ ಕಾಳಜಿ ಬಯಸುವ ನಾಯಕ. ಗದಗ ಜಿಲ್ಲೆಯಲ್ಲಿ ಕಳೆದ 20 ವರ್ಷಗಳಿಂದ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಪಕ್ಷ ಪಂಗಡವೆನ್ನದೆ ಉತ್ತಮ ಯುವ ರಾಜಕಾರಣಿಗಳ ಗೆಲುವಿಗೆ ಕಾರಣರಾಗಿ ಬೆಂಬಲ ತೋರಿದವರು.

ಕೋವಿಡ್ ಸಂಕಷ್ಟದ ಸಂದರ್ಭದಲ್ಲಿ ಸ್ನೇಹಿತರನ್ನು ಸಂಘಟಿಸಿ ಪ್ರತಿದಿನ ಆಹಾರದ ಕಿಟ್‌ಗಳನ್ನು ಅಸಹಾಯಕರಿಗೆ, ಬಡವರಿಗೆ, ನಿರ್ಗತಿಕರಿಗೆ ವಿತರಿಸಿ ಬಡವರ ಹಸಿವು ನೀಗಿಸುವ ಪ್ರಯತ್ನ ಮಾಡಿದ ಸಮಾಜಮುಖಿ ಸೇವೆ ನಿಜಕ್ಕೂ ಮಾದರಿ. ಕೋವಿಡ್ 2ನೇ ಅಲೆಯ ಸಂದರ್ಭದಲ್ಲಿ, ಎಲ್ಲೆಡೆ ಹೊಟೇಲ್‌ಗಳು ಬಂದ್ ಆಗಿದ್ದ ಸಂದರ್ಭದಲ್ಲಿ ಗದಗ ಜಿಲ್ಲೆಗೆ ರೋಗಿಗಳನ್ನು ಕರೆದುಕೊಂಡು ಬರುವ, ನೂರಾರು ಜನರಿಗೆ ಊಟದ ವ್ಯವಸ್ಥೆ ಮಾಡಿ ಹಸಿವು ನೀಗಿಸಿದ ಕಾರ್ಯ ಶ್ಲಾಘನೀಯ.

ಸಂಘಟನೆ, ರಾಜಕಾರಣ ಕೆಲಸಗಳೊಂದಿಗೆ ದೇಶಭಕ್ತಿಯ ಜಾಗೃತಿ ಮೂಡಿಸುವ ಮಹತ್ವದ ಕಾರ್ಯಗಳನ್ನು ಅವರ ಸ್ನೇಹಿತರೊಂದಿಗೆ ಮಾಡಿದ್ದಾರಲ್ಲದೆ ಹಲವು ಹೋರಾಟಗಳಲ್ಲಿ ಮುಂಚೂಣಿಯಲ್ಲಿದ್ದವರು. ಮೊದಲಿನಿಂದಲೂ ಧಾರ್ಮಿಕ ಕಾರ್ಯಕ್ರಮಗಳಿಗೆ ಹೆಚ್ಚು ಉತ್ತೇಜನ ಕೊಟ್ಟು ಕುಟುಂಬದ ಹಿನ್ನಲೆಯ ಧರ್ಮ ಕಾರ್ಯಗಳಲ್ಲಿ ಅತೀವ ಆಸಕ್ತಿಯೊಂದಿಗೆ ತಮ್ಮನ್ನು ತೊಡಗಿಸಿಕೊಂಡವರು.

ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ, ರಾಜಕೀಯ ಸೇವೆಗಾಗಿ ತಮ್ಮ ಕುಟುಂಬದ ಸಹಕಾರದೊಂದಿಗೆ ಸ್ನೇಹಿತರ ಬಳಗ ಕಟ್ಟಿಕೊಂಡು ಸದಾಶಯದಲ್ಲಿರುವ ಬಾಷಸಾಬ ಮಲ್ಲಸಮುದ್ರ ಒಬ್ಬ ಅಪ್ಪಟ ಸಮಾಜಮುಖಿ ಸೇವೆಯ ಭವಿಷ್ಯದ ಯುವ ನಾಯಕ. ಕ್ರಿಯಾತ್ಮಕ, ರಚನಾತ್ಮ ಯೋಜನೆಗಳಿಗೆ ಹೆಸರಾಗಿ, ನವೀನ ಚಿಂತನೆಗಳಿಗೆ, ಕನಸುಗಳಿಗೆ ಮಾದರಿಯಾದವರು. ಸಮಾಜದ ಕಟ್ಟಕಡೆಯ ಜನರ ಕೂಗಿಗೆ ಧ್ವನಿಯಾದವರು. ಯುವಸಮೂಹದೊಂದಿಗೆ ಹೊಸ ಬದಲಾವಣೆ ಕನಸು ಹೊತ್ತು ನಿಂತಿರುವ ಭಾಷಾಸಾಬ ಮಲ್ಲಸಮುದ್ರ ಜನಪರ ನಿಲುವುಗೆ ಸಾಕ್ಷಿಯಾದವರು.

ಸರಳತೆ, ಸೌಜನ್ಯತೆ, ನಗುಮೊಗದೊಂದಿಗೆ ತಮ್ಮಲ್ಲಿ ಬರುವ ಜನರ ಬೇಕು-ಬೇಡಿಕೆಗಳನ್ನು ಆಲಿಸಿ, ಆಲಂಗಿಸಿ, ಸಾಧ್ಯವಾದಷ್ಟು ಪರಿಹರಿಸುವ ಹೃದಯ ವಿಶಾಲತೆ ನಿಜಕ್ಕೂ ಅನುಕರಣೀಯ. ಪದವಿ ಶಿಕ್ಷಣದ ನಂತರ ಹೂವಿನ ವ್ಯಾಪಾರದಲ್ಲಿ ತಂದೆಯ ಜೊತೆ ತೊಡಗಿಕೊಂಡರು. ನಂತರ ಹೋರಾಟದ ಬದುಕಿನೊಂದಿಗೆ ಬಂದರು. ಸದಾಕಾಲ ಸ್ನೇಹ ಜೀವಿಯಾದ ಭಾಷಾಸಾಬ್, ಬಾರ್ ಹಟಾವ್ ಮಠ ಬಚಾವ್ ಎಂಬ ಹೋರಾಟದಿಂದ ಹೋರಾಟದ ಬದುಕು ಪ್ರಾರಂಭವಾಯಿತು. ನಂತರ ಹೂವಿನ ವ್ಯಾಪಾರಿಗಳಿಗೆ ವಹಿವಾಟು ಮಾಡಲು ನಗರದ ಎಪಿಎಂಸಿಯಲ್ಲಿ ಎಲ್ಲಾ ವ್ಯಾಪಾರಿಗಳಿಗೆ ಅಂಗಡಿಗಳನ್ನು ದೊರಕಿಸಿಕೊಡಲು ಇತರ ವ್ಯಾಪಾರಿಗಳ ಸಹಾಯದಿಂದ

ಶಾಸಕರ ಮನವೊಲಿಸಿ ಶಾಶ್ವತವಾಗಿ ಎಲ್ಲರಿಗೂ ಅಂಗಡಿಗಳನ್ನು ಕೊಡಿಸುವಲ್ಲಿ ಯಶಸ್ವಿಯಾದರು. ನಂತರ 2019ರಲ್ಲಿ ಬೀದಿ ವ್ಯಾಪಾರಿಗಳ ಪಕ್ಷ ಹೋರಾಟ ಸಮಿತಿಯ ಚುನಾವಣೆಯಲ್ಲಿ ಅತಿ ಹೆಚ್ಚಿನ ಮತಗಳಿಂದ ಜನ ಪ್ರತಿನಿಧಿಯಾಗಿ ಆಯ್ಕೆಯಾದರು. ಬೀದಿ ಬದಿ ವ್ಯಾಪಾರಿಗಳಿಗಾಗಿ ಕಲ್ಯಾಣ ಕೇಂದ್ರ ನಿರ್ಮಿಸಲು ಸಿಎ ಸೈಟ್ ಪಡೆದುಕೊಂಡರು.

ನಂತರ 300 ಜನ ವ್ಯಾಪಾರಿಗಳಿಗೆ ತಳ್ಳು ಗಾಡಿ ಅಂಗಡಿಗೆ ಕೊಡೆ, ತಕ್ಕಡಿ ಕಲ್ಲು ವಿತರಿಸಿದರು. ಸ್ಥಳೀಯ ಶಾಸಕರ ಸಹಾಯದಿಂದ 2025ರವರೆಗೆ ಬೀದಿ ವ್ಯಾಪಾರಿಗಳ ಶುಲ್ಕದಲ್ಲಿ ಪ್ರತಿ ವರ್ಷ ಕ್ರಿಯಾ ಯೋಜನೆ ರೂಪಿಸಿ, ಬಿದಿ ವ್ಯಾಪಾರಿಗಳ ಮಕ್ಕಳಿಗೆ ಶಾಲಾ-ಶಿಕ್ಷಣ, ಮಕ್ಕಳ ಮದುವೆಗೆ ಸಹಾಯ, ಆಕಸ್ಮಿಕ ಅವಘಡಕ್ಕೆ ಸಹಾಯಧನ ನೀಡಲು ನಿರಂತರ ಹೋರಾಟ ಮಾಡಿದ ಹೆಗ್ಗಳಿಕೆ ಬಾಷಾಸಾಬ್ ಮಲ್ಲಸಮುದ್ರ ಅವರಿಗೆ ಸಲ್ಲುತ್ತದೆ.

ಹೋರಾಟದ ಬದುಕಿನಲ್ಲಿ ತಮ್ಮ ಸಮುದಾಯಕ್ಕೆ ಏನಾದರೂ ಕೊಡುಗೆ ನೀಡಬೇಕು ಅನ್ನುವ ಛಲದೊಂದಿಗೆ ಭಾಷಾಸಾಬ್ ಮಲ್ಲಸಮುದ್ರ ಚುನಾವಣೆಗೆ ಧುಮುಕಿದ್ದಾರೆ. ಬಡವರಿಗೆ ಉನ್ನತ ಶಿಕ್ಷಣ ಕೊಡಿಸಲು, ಕಲ್ಯಾಣ ಕೇಂದ್ರ ಸ್ಥಾಪನೆ, ಖಬರಸ್ಥಾನ್ ಅಭಿವೃದ್ಧಿ ಇನ್ನೂ ಹಲವಾರು ವಿಚಾರಗಳನ್ನು ಮುಂದಿಟ್ಟುಕೊಂಡು, ಅವಳಿ ನಗರದ ಸಮಾನ ಮನಸ್ಕ ಯುವಕರ ತಂಡದೊಂದಿಗೆ ಅಂಜುಮನ್ ಇಸ್ಲಾಂ ಸಂಸ್ಥೆಯ ಚುನಾವಣೆಗೆ ಧುಮುಕಿದ್ದಾರೆ.

### ಶಾಕೀರ್ ಅಹ್ಮದ್ ಮರ್ದಾನಸಾಬ ಕಾತರಕಿ




ಬೆಟಗೇರಿ ನರಸಾಪುರ ಆಶ್ರಯ ಕಾಲೋನಿಯಲ್ಲಿ ಅತ್ಯಂತ ಬಡತನದಲ್ಲಿ ಬೆಳೆದ ಶಾಕೀರ ಮರ್ದಾನಸಾಬ ಕಾತರಕಿ ಸದ್ಯ ಅಂಜುಮನ್ ಇಸ್ಲಾಂ ಸಂಸ್ಥೆಯ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದಾರೆ. 17-7-1979ರಲ್ಲಿ ಜನಿಸಿದ ಇವರು ಬಡತನದಲ್ಲಿಯೇ ಬಾಲ್ಯ ಕಳೆದವರು. ನರಸಾಪುರ ಆಶ್ರಯ ಕಾಲೋನಿಯಲ್ಲಿ ಯಾವುದೇ ಸೌಕರ್ಯಗಳು ಇಲ್ಲದ ಬದುಕು. ಇದೇ ಬಡತನವೇ ಇವರಲ್ಲಿ ಹೋರಾಟ, ಸಮಾಜ ಸೇವೆಯ ದಾರಿ ತೋರಿಸಿದ್ದು.

ಸಂಘಟನೆಯ ಜೊತೆಗೆ ಹೋರಾಟಗಳಲ್ಲಿ ಪಾಲ್ಗೊಳ್ಳುತ್ತಾ, ನಿವೇಶನ ರಹಿತರಿಗೆ ಜಾಗ ಕೊಡಿಸುವಲ್ಲಿ, ಈದಗಾ ಮೈದಾನಕ್ಕಾಗಿ ಹೋರಾಟ ಮಾಡಿದ್ದಾರೆ. ರಂಜಾನ್ ತಿಂಗಳಲ್ಲಿ 48 ಹಾಸ್ಟೆಲ್‌ಗಳಲ್ಲಿ ಊಟದ ವ್ಯವಸ್ಥೆ ಮಾಡಿಸುತ್ತಾ ಬಂದಿದ್ದಾರೆ. ಅಷ್ಟೇ ಅಲ್ಲದೆ ನಿರ್ಗತಿಕರಿಗೆ ಬೆಳಗಿನ ಜಾವ 30 ದಿನಗಳ ಕಾಲ ಉಪಹಾರದ ವ್ಯವಸ್ಥೆ ಮಾಡುತ್ತ ಬಂದಿದ್ದಾರೆ. ಕೊರೋನಾ ಸಂದರ್ಭದಲ್ಲಿ ಊಟದ ವ್ಯವಸ್ಥೆಯನ್ನೂ ಸ್ವಂತ ದುಡಿಮೆಯ ಹಣದಿಂದಲೇ ಮಾಡಿದ್ದಾರೆ.

ಗದಗ-ಬೆಟಗೇರಿ ಅಂಜುಮನ್ ಇಸ್ಲಾಂ ಸಂಸ್ಥೆಯ ಚುನಾವಣೆಗೆ ಕುಟುಂಬದವರು, ಆಶ್ರಯ ಕಾಲೋನಿಯ ಜಮಾತಿನ ಗುರು-ಹಿರಿಯರ ಅಪೇಕ್ಷೆಯಂತೆ ಸ್ಪರ್ಧಿಸುತ್ತಿದ್ದಾರೆ.

ಬಡತನದಲ್ಲಿರುವ ಯುವಕರಿಗೆ ಉದ್ಯೋಗ ಸೃಷ್ಟಿ ಮಾಡುವುದು, ಸಮುದಾಯದ ಅನುಕೂಲಕ್ಕಾಗಿ ಮದುವೆ ಹಾಲ್, ಸಮುದಾಯ ಭವನ ನಿರ್ಮಿಸುವ ಕನಸು ಕಂಡಿದ್ದಾರೆ.

### ಆಸೀಫ್ ಜಿ. ದಂಡಿನ




ಗದಗ-ಬೆಟಗೇರಿ ಅಂಜುಮನ್ ಇಸ್ಲಾಂ ಸಂಸ್ಥೆಯ ಚುನಾವಣೆಯಲ್ಲಿ ಗದಗನ ಸಿದ್ಧರಾಮೇಶ್ವರ ಓಣಿಯಿಂದ ಸ್ಪರ್ಧೆ ಮಾಡಿರುವ ಆಸಿಫ್ ದಂಡಿನ ಇವರು ಜನರ ಸೇವೆಯ ಮೂಲಕ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಇವರ ತಂದೆ ಗೌಸಮೋದಿನ್ ದಂಡಿನ 2016ರಿಂದ 2025ರವರೆಗೆ ಗದಗ ಜಿಲ್ಲೆಯ ವಕ್ಫ್‌ನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇವರ ಅಧ್ಯಕ್ಷಗಿರಿಯಲ್ಲಿ ಸಮಾಜಸೇವೆಯಲ್ಲಿ ತೊಡಗಿಸಿಕೊಂಡು ಸಮಾಜಕ್ಕೆ ಸರ್ಕಾರದಿಂದ ಲಭ್ಯವಿರುವ ಸೌಲಭ್ಯಗಳನ್ನು ಕೊಡಿಸುವಲ್ಲಿ ಮುಂಚೂಣಿಯಲ್ಲಿದ್ದರು. ತಂದೆ ಗೌಸಮೋದಿನ ಅವರು ಗದಗ ಶಾಸಕರಾದ ಎಚ್.ಕೆ. ಪಾಟೀಲರಿಂದಲೂ ಮೆಚ್ಚುಗೆ ಪಡೆಯುತ್ತಾ, ಗದಗ ಜಿಲ್ಲೆಯ ಮಸೀದಿ, ಖಬರಸ್ತಾನ್ ಅಭಿವೃದ್ಧಿಗಾಗಿ ಶ್ರಮಿಸಿದ್ದರು. ಸಾಮಾಜಿಕ ಕಳಕಳಿ, ಮುಂಬರುವ ದಿನಗಳಲ್ಲಿ ಸರಕಾರದಿಂದ ಸಿಗುವ ಸೌಲಭ್ಯಗಳನ್ನು ತಲುಪಿಸುವ ಗುರಿಯೊಂದಿಗೆ ಆಸೀಫ್ ದಂಡಿನ ಸ್ಪರ್ಧೆ ಮಾಡಿದ್ದಾರೆ.

### ಕರೀಮಸಾಬ ರಾಜೇಸಾಬ ಸುಣಗಾರ




ಬಾಲ್ಯದಿಂದಲೇ ನಿರಂತರ ಹೋರಾಟಗಳ ಮೂಲಕ ಸದ್ದು ಗದ್ದಲವಿಲ್ಲದೆ ಯುವನಾಯಕರಾಗಿ ಉತ್ತರ ಕರ್ನಾಟಕದಲ್ಲಿ ಸುದ್ದಿಯಾದವರು. ಕನ್ನಡಪರ ಸಂಘಟನೆಗಳೂ ಸೇರಿದಂತೆ ಹಲವಾರು ಸಾಮಾಜಿಕ ಕಾಯಕರ್ತರ ಪಡೆಯನ್ನು ಹುಟ್ಟುಹಾಕಿದ ಕರೀಮ ಸುಣಗಾರ ನಾಯಕತ್ವ ಬೆಳವಣಿಗೆಗೆ ಇನ್ನಷ್ಟು ಪುಷ್ಠಿ ನೀಡಿತು. ಗದಗ ಜಿಲ್ಲೆಯಲ್ಲಿ ಸಂಭವಿಸಿದ ನೆರೆ, ಪ್ರವಾಹ, ಆಕಾಲಿಕ ಮಳೆ, ಬರ ಸೇರಿದಂತೆ ನೈಸರ್ಗಿಕ ವಿಕೋಪಕ್ಕೆ ತುತ್ತಾದ ಗ್ರಾಮಗಳ ಸಂತ್ರಸ್ಥರಿಗೆ ಕರೀಮ್ ಸುಣಗಾರ ನೇತೃತ್ವದ ಅಭಿಮಾನಿ ಬಳಗದಿಂದ ದಿನ ನಿತ್ಯದ ಸಾಮಗ್ರಿಗಳನ್ನು ಕೊಡುವುದರ ಮೂಲಕ ಮಾನವೀಯತೆ ಮೆರೆದಿದ್ದು, ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಪುಸ್ತಕ ನೀಡಿದ್ದು ಅವರ ಸಾಮಾಜಿಕ ಕಳಕಳಿಗೆ ಹಿಡಿದ ಕೈಗನ್ನಡಿಯಾಗಿದೆ.

ಕೇಳಿ ಕೊಡುವ ನೂರಾರು ಬಹುಮಾನಗಳಿಗಿಂತ ಕೇಳದೇ ಕೊಡುವ ಗೌರವ ಬಹಳ ದೊಡ್ಡದು ಎಂಬುದಕ್ಕೆ ಕರೀಮ ಸುಣಗಾರ ನಿದರ್ಶನವಾಗಬಲ್ಲರು. ಅತ್ಯಂತ ದಕ್ಷತೆ, ಪ್ರಾಮಾಣಿಕತೆಯಿಂದ, ಯಾವುದೇ ಕಪ್ಪುಚುಕ್ಕೆಯಿಲ್ಲದೆ ಸಾಮಾಜಿಕವಾಗಿ ಬೆಳೆಯುತ್ತಾ ಹಂತ-ಹಂತವಾಗಿ ಮೇಲ್ಮಟಕ್ಕೇರಿದ ಕರೀಮ ಸುಣಗಾರರ ಸೇವೆ ಸಮಾಜಕ್ಕೆ ಅಗತ್ಯವಾಗಿದೆ. 2010ರಿಂದ ಗದಗ ತಾಲೂಕಿನ ಕಾಂಗ್ರೆಸ್ ಜನರಲ್ ಸೆಕ್ರೆಟರಿಯಾಗಿ ಅಲ್ಪಸಂಖ್ಯಾತರ ಪಕ್ಷದ ಕಾಂಗ್ರೆಸ್ ಪಕ್ಷದ ಸೇವೆಯನ್ನು ಮಾಡಿದ್ದಾರೆ. ಈದ್ ಮಿಲಾದ್ ಕಮಿಟಿ ಕಾರ್ಯದರ್ಶಿಯಾಗಿ ಸೇವೆ ಮಾಡಿದ್ದಾರೆ. ಸಮಾಜದ ಯುವಕರು ಹಾಗೂ ಗುರು-ಹಿರಿಯರ ಸಲಹೆಯಂತೆ ಈ ಬಾರಿ ಅಂಜುಮನ್ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದಾರೆ.

### (ಆರೀಫ್) ಮೆಹಬೂಬಸಾಬ ಮನ್ನೂರಲಿ ಹುನಗುಂದ




ಗದಗ ಖಾನತೋಟ ಓಣಿಯ ನೂರಾನಿ ಮಸ್ಜಿದ್ ಕಾರ್ಯದರ್ಶಿಯಾಗಿ ಕಾರ್ಯ ನಿರ್ವಹಿಸುತ್ತ, ಸದ್ಯ ಗದಗ ಬೆಟಗೇರಿ ಅಂಜುಮನ್ ಚುನಾವಣೆಗೆ ಸ್ಪರ್ಧಿಸಿದ್ದಾರೆ. ಇವರು ನೌಜವಾನ್ ಸಂಘದ ಉಪಾಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಹಬ್ಬದ ದಿನಗಳಲ್ಲಿ ಮುಸ್ಲಿಂ ಸಮಾಜಕ್ಕೆ, ಮುಸ್ಲಿಂ ಸಮುದಾಯದ ಮಕ್ಕಳಿಗೆ ಹಾಗೂ ನಿರ್ಗತಿಕರಿಗೆ ಇವರ ಕೊಡುಗೆ ಅಪಾರ. ಮುಸ್ಲಿಂ ಸಮುದಾಯದ ಮಕ್ಕಳಿಗೆ ವಿದ್ಯಾಭ್ಯಾಸದ ಕಾಳಜಿ ಹಾಗೂ ಖಬರಸ್ತಾನ್ ಅಭಿವೃದ್ಧಿಗಾಗಿ ಇವರ ಕಾಳಜಿ ಅಪಾರ.

10ನೇ ತರಗತಿಯವರೆಗೆ ಶಿಕ್ಷಣ ಕಲಿತು, ಮುಂದೆ ವೆಲ್ಡಿಂಗ್ ಕೆಲಸದಲ್ಲಿ ತೊಡಗಿಕೊಂಡರು. ಸಮಾಜ ಸೇವೆ ಮಾಡಬೇಕು ಎಂಬ ಉತ್ಸಾಹ ಮನದಲ್ಲಿ ಸದಾ ಕಾಡುತ್ತಿತ್ತು. ಸದ್ಯ ಅಂಜುಮನ್ ಚುನಾವಣೆಯಲ್ಲಿ ಆತ್ಮೀಯ ಗೆಳೆಯರ ಬಳಗ ಹಾಗೂ ಸಮುದಾಯದ ಗುರುಗಳ ಒತ್ತಾಯದಂತೆ ಅಂಜುಮನ್ ಕಮಿಟಿಯ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದಾರೆ. ಅಷ್ಟೇ ಅಲ್ಲದೆ, ಕಳೆದ ವರ್ಷ ಹಬ್ಬದ ಕಮಿಟಿಯ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ.

### ಯೂಸುಫ್ ಅಬ್ದುಲ್ ಸತ್ತಾರ್‌ಸಾಬ್ ಕೊಟ್ಟೂರ




ಗದಗ ನಗರದಲ್ಲಿ 1/6/1973ರಂದು ಜನನ. ಕೊಟ್ಟೂರು ಮನೆತನದಲ್ಲಿ ಬೆಳೆದ ಇವರು, ಬಾಲ್ಯದಲ್ಲೇ ಮುಸ್ಲಿಂ ಸಮುದಾಯಕ್ಕೆ ಕೊಡುಗೆ ನೀಡಬೇಕು ಎಂಬ ಅಭಿಲಾಷೆ ಹೊಂದಿದವರು. ಬದುಕಿನಲ್ಲಿ ಸಮಾಜಕ್ಕೆ ಏನಾದರೊಂದು ಕೊಡುಗೆ ನೀಡಬೇಕು ಎಂಬ ಕನಸು ಮನದಲ್ಲಿತ್ತು. ಜೀವನದ ವೃತ್ತಿಯಾದ ಫರ್ನಿಚರ್ ಕೆಲಸವನ್ನು ಮಾಡುತ್ತಾ ಸ್ವಂತ ದುಡಿಮೆಯಲ್ಲಿ ಸಮಾಜದ ಹಿತದೃಷ್ಟಿಯನ್ನು ನೋಡಿಕೊಳ್ಳುತ್ತಾ, ಬಡತನದ ಕುಟುಂಬದಿಂದ ಬೆಳೆದಂತ ವ್ಯಕ್ತಿಯಿವರು. ಬಡವರ ಬಗ್ಗೆ ಕಾಳಜಿ ಹಾಗೂ ನೂರಾನಿ ಮಸ್ಜಿದ್ ಚೇರಮನ್ ಆಗಿಯೂ ಸೇವೆ ಸಲ್ಲಿಸುತ್ತ ಬಂದಿದ್ದಾರೆ. ಹಿಂದೂ-ಮುಸ್ಲಿಂ ಎನ್ನದೆ ಸಮಾಜ ಸೇವೆ ಮಾಡುತ್ತಾ ಯೂಸುಫ್ ಕೊಟ್ಟೂರು ಅವರು ಎಲ್ಲರೊಳಗೊಂದಾಗಿ ಬದುಕು ನಡೆಸುತ್ತಿದ್ದಾರೆ.

ಸದ್ಯ ನಡೆಯಲಿರುವ ಗದಗ-ಬೆಟಗೇರಿ ಅಂಜುಮನ್ ಚುನಾವಣೆಯಲ್ಲಿ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದಾರೆ.

### ಸುಲೇಮಾನ ಮೆಹಬೂಬಸಾಬ ಮಾಳೆಕೊಪ್ಪ




ಇವರು 10 ವರ್ಷಗಳಿಂದ ಸಮಾಜ ಸೇವೆಯಲ್ಲಿ ತೊಡಗಿಕೊಂಡಿದ್ದಾರೆ. ಇವರ ತಂದೆ ಮೆಹಬೂಬ್ ಸಾಬ್ ಮಾಳೆಕೊಪ್ಪ ಅವರು ಮುಸ್ಲಿಂ ಸಮುದಾಯಕ್ಕೆ ಅಪಾರ ಕೊಡುಗೆಯನ್ನು ನೀಡಿದ್ದಾರೆ. ಜನರ ಸೇವೆ ಮಾಡಲು ಅಧಿಕಾರವೇ ಬೇಕಿಲ್ಲ. ಇಚ್ಛಾಶಕ್ತಿ, ಸಾಮಾಜಿಕ ಮನೋಭಾವ ಇದ್ದರೆ ಸಾಕು. ಜೊತೆಗೆ ಕುಟುಂಬದ ಹಿರಿಯರು ಹಾಕಿಕೊಟ್ಟ ಪರಂಪರೆ ಮುನ್ನಡೆಸಬೇಕೆಂಬ ಹಂಬಲವೊಂದಿದ್ದರೆ ಸಮಾಜದಲ್ಲಿ ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಬಹುದು. ಅಂತಹವರ ಸಾಲಿಗೆ ಸೇರುವ ಭವಿಷ್ಯದ ಭರವಸೆಯ ಯುವ ನಾಯಕರಾಗಿ ಸುಲೇಮಾನ ಮೆಹಬೂಬಸಾಬ ಮಾಳೆಕೊಪ್ಪ ಕಾಣಿಸಿಕೊಳ್ಳುತ್ತಾರೆ. ಸದ್ಯ ಅಂಜುಮನ್ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದಾರೆ.

### ಬಸೀರ ಅಹ್ಮದ ಮೋದಿನಸಾಬ ಸಂಕನಾಳ




ಸಾಮಾಜಿಕ ಸೇವೆಯೊಂದಿಗೆ ಸಾರ್ವಜನಿಕ ಬದುಕಿನಲ್ಲಿ ಕಾಣಿಸಿಕೊಳ್ಳುತ್ತ, ನೊಂದು-ಬೆಂದವರ, ಬಡವರ, ನಿರ್ಗತಿಕರ, ನಿಸ್ಸಾಹಾಯಕರ ಸೇವೆಗೆ ಎತ್ತಿದ ಕೈ. ಬಸೀರ ಅಹ್ಮದ ಮೋದಿನಸಾಬ ಸಂಕನಾಳ ಇವರು ಬೆಟಗೇರಿಯ ಹೆಲ್ತ್ ಕ್ಯಾಂಪ್ ಚಪ್ಪರಬಂದ್ ಸಮಾಜದ ಒಬ್ಬ ನಿಷ್ಠಾವಂತ ಕಾರ್ಯಕರ್ತ ಹಾಗೂ ಸಮಾಜ ಸೇವೆಯ ಮೂಲಕ ಜನರ ಮನಸ್ಸನ್ನು ಗೆದ್ದಿದ್ದಾರೆ. ಇವರು ಗದಗ-ಬೆಟಗೇರಿ ಅಂಜುಮನ್ ಚುನಾವಣೆಗೆ ಸ್ಪರ್ಧಿಸಿ ಅದೃಷ್ಟ ಪರೀಕ್ಷೆಗೆ ಮುಂದಾಗಿದ್ದಾರೆ.

### ಸಾದಿಕ್ ಬಡೇಸಾಬ ನರೇಗಲ್





ಗದಗ-ಬೆಟಿಗೇರಿ ಅಂಜುಮನ್ ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವ ಇವರು, ಕನಸು ಗದಗ-ಬೆಟಗೇರಿ ಮುಸ್ಲಿಂ ಹೆಣ್ಣು ಮಕ್ಕಳ ಹಿತ ಚಿಂತನೆ. ಇವರು ಖಬರಸ್ತಾನ್ ಅಭಿವೃದ್ಧಿಗಾಗಿ, ಬಡ ಮಕ್ಕಳಿಗಾಗಿ ಶಾಲೆ-ಕಾಲೇಜು, ಆಸ್ಪತ್ರೆ ಹಾಗೂ ಇನ್ನಿತರ ಸೇವೆಯ ಕನಸು ಕಂಡಿದ್ದಾರೆ. ಆರ್ಥಿಕವಾಗಿ ಹಿಂದುಳಿದ ತಮ್ಮ ಸಮುದಾಯಕ್ಕೆ ತಮ್ಮಿಂದ ಸಾಧ್ಯವಾದ ಕೊಡುಗೆ ನೀಡಬೇಕೆನ್ನುವ ಹಿತದೃಷ್ಟಿಯಿಂದ ಇವರು ಗದಗ-ಬೆಟಗೆರೆ ಅಂಜುಮನ್ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದಾರೆ.

### ಮೆಹಬೂಬಬಾಷಾ ದಾಲವಸಾಬ ಗಡಾದ




ಅಂಜುಮನ್ ಇಸ್ಲಾಂ ಸಂಸ್ಥೆಯ ಚುನಾವಣೆಯಲ್ಲಿ ಬೆಟಗೇರಿ ಭಾಗದಿಂದ ಮೆಹಬೂಬ್ ಬಾಷಾ ಸ್ಪರ್ಧಿಸುತ್ತಿದ್ದು, ಇವರ ಬಳಗ ಅಪಾರವಾಗಿದೆ. ಇವರು ದಾನ-ಧರ್ಮ ಮಾಡುವುದರಲ್ಲಿ ಎತ್ತಿದ ಕೈ. ಹಾಗಿದ್ದರೂ, ಬಲಗೈಯಿಂದ ಮಾಡಿದ ಸಹಾಯ ಎಡಗೈಗೆ ಗೊತ್ತಾಗಬಾರದು ಎಂಬಂತೆ ತಮ್ಮ ಕೆಲಸವನ್ನು ನಿರ್ವಹಿಸುತ್ತ ಬಂದಿದ್ದಾರೆ. ಗದುಗಿನ ಎಸ್.ಎಮ್. ಕೃಷ್ಣ ನಗರದ ಬಡ ಕುಟುಂಬದಲ್ಲಿ ಬೆಳೆದ ವ್ಯಕ್ತಿ ಮೆಹಬೂಬಬಾಷಾ ದಾವಲಸಾಬ ಗಡಾದ ಬಾಲ್ಯದಲ್ಲೇ ನಿರಂತರ ಹೋರಾಟ ಮಾಡಬೇಕೆನ್ನುವ ಛಲಗಾರ. ನಂತರ ಜನಪರ ಸೇವೆಗೆ ಅಣಿಯಾಗಿ, ಯುವನಾಯಕರಾಗಿ ಹೊರಹೊಮ್ಮಿದ್ದು ಇವರು ಅದೃಷ್ಟ ಪರೀಕ್ಷೆಗೆ ಮುಂದಾಗಿದ್ದಾರೆ.

### ಬಾಬು ದಾವಲಸಾಬ ನರಸಾಪೂರ




ಜನಾಕರ್ಷಕ ವ್ಯಕ್ತಿತ್ವದ, ಭರವಸೆಯ ನಾಯಕ ಬಾಬು ದಾವಲಸಾಬ ನರಸಪೂರ ಸಾಮಾಜಿಕ, ರಾಜಕೀಯ ಕನಸು ನನಸಾಗಲಿ ಎಂಬುದು ಅವರ ಅಭಿಮಾನಿಗಳ ಹಂಬಲವಾಗಿದೆ. ಬಾಬು ದಾವಲಸಾಬ ನರಸಪೂರ ಅವರ ಅಭಿಮಾನಿ ಬಳಗವು ಸಮಾಜಮುಖಿ ಸೇವಾ ಕಾರ್ಯಗಳೊಂದಿಗೆ ಮುನ್ನಡೆಯುತ್ತಿದ್ದಾರೆ. ಕೇಳಿ ಕೊಡುವ ನೂರಾರು ಬಹುಮಾನಗಳಿಗಿಂತ ಕೇಳದೇ ಕೊಡುವ ಗೌರವ ಬಹಳ ದೊಡ್ಡದು ಎಂಬುದಕ್ಕೆ ಬಾಬು ದಾವಲಸಾಬ ನರಸಪೂರ ಉದಾಹರಣೆಯಾಗಬಲ್ಲರು. ಸದ್ಯ ಗದಗ-ಬೆಟೆಗೇರಿ ಅಂಜುಮನ್ ಚುನಾವಣೆಗೆ ಸ್ಪರ್ಧಿಸುತ್ತಿರುವ ಇವರು, ಮುಂಬರುವ ದಿನಗಳಲ್ಲಿ ಮುಸ್ಲಿಂ ಯುವಕರಿಗೆ ಉದ್ಯೋಗ, ಮಹಿಳೆಯರ ಸಬಲೀಕರಣ, ಆಸ್ಪತ್ರೆ ಹೀಗೆ ಇನ್ನೂ ಅನೇಕ ಕಾರ್ಯಗಳನ್ನು ಮಾಡಬೇಕೆನ್ನುವ ಹಂಬಲ ಹೊಂದಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka